ಸಂಪುಟ: 11 ಸಂಚಿಕೆ: 230 ಪುಟಗಳು: 4+2 ಬೆಲೆ: ₹ 3.00 ಭಾನುವಾರ, ಅಕ್ಟೋಬರ್ 18, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 230 Pages : 4+2 Rate : 3.00 Sunday, October 18, 2026 Gadag RNI No : KARKAN/2015/63412 E-mail: vijayasakshidaily@gmail.com Post Regn.No: GDG/72/2020-22

## ಪಶ್ಚಿಮ ಪದವೀಧರ ಕ್ಷೇತ್ರದ ಚುನಾವಣೆ: ಪ್ರತಿಬಂಧಕಾಜ್ಞೆ ಜಾರಿ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಪಶ್ಚಿಮ ಪದವೀಧರ ಕ್ಷೇತ್ರದ ದ್ವೈವಾರ್ಷಿಕ ಚುನಾವಣೆಯ ಮತದಾನ ಅಕ್ಟೋಬರ್ 23ರಂದು ನಡೆಯಲಿರುವ ಹಿನ್ನೆಲೆಯಲ್ಲಿ, ಜಿಲ್ಲೆಯಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಹಾಗೂ ಮುಕ್ತ, ಸುಗಮ ಮತದಾನಕ್ಕೆ ಅನುಕೂಲ ಕಲ್ಪಿಸುವ ಉದ್ದೇಶದಿಂದ ಅಕ್ಟೋಬರ್ 21ರ ಸಂಜೆ 4 ಗಂಟೆಯಿಂದ ಅಕ್ಟೋಬರ್ 23ರ ಮಧ್ಯರಾತ್ರಿಯವರೆಗೆ ಮಾದರಿ ನೀತಿ ಸಂಹಿತೆ ಹಾಗೂ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ ಎಂದು ಜಿಲ್ಲಾ ದಂಡಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಆದೇಶಿಸಿದ್ದಾರೆ.

ಚುನಾವಣೆಗೆ ಸಂಬಂಧಿಸಿದಂತೆ ಗದಗ ಜಿಲ್ಲೆಯಲ್ಲಿ ಐದು ಜನರಿಗಿಂತ ಹೆಚ್ಚು ಜನರು ಗುಂಪು ಸೇರುವುದು, ಮೆರವಣಿಗೆ ನಡೆಸುವುದು ಹಾಗೂ ಸಭೆ–ಸಮಾರಂಭಗಳನ್ನು ಆಯೋಜಿಸುವುದನ್ನು ನಿಷೇಧಿಸಲಾಗಿದೆ. ಅಭ್ಯರ್ಥಿಗಳು ಮತ್ತು ಅವರ ಬೆಂಬಲಿಗರು ಮನೆಮನೆಗೆ ತೆರಳಿ ಮತಯಾಚನೆ ಮಾಡಬಹುದಾಗಿದ್ದು, ಈ ಸಂದರ್ಭದಲ್ಲಿ ಐದಕ್ಕಿಂತ ಹೆಚ್ಚು ಜನರು ಸೇರುವಂತಿಲ್ಲ.

ಮತದಾನದ ದಿನ ಮತಗಟ್ಟೆಗಳ ಸುತ್ತಲಿನ 100 ಮೀಟರ್ ವ್ಯಾಪ್ತಿಯಲ್ಲಿ ಚುನಾವಣಾ ಪ್ರಚಾರ ಮಾಡುವುದನ್ನು ನಿಷೇಧಿಸಲಾಗಿದೆ. ಈ ಅವಧಿಯಲ್ಲಿ ಪ್ರಚಾರ, ವಾಹನಗಳ ಬಳಕೆ ಹಾಗೂ ಧ್ವನಿವರ್ಧಕಗಳ ಬಳಕೆಗೆ ಅವಕಾಶವಿರುವುದಿಲ್ಲ. ಸಾಮಾನ್ಯವಾಗಿ ಮತಕ್ಷೇತ್ರದಲ್ಲಿ ವಾಸಿಸದ ಹಾಗೂ ಆ ಕ್ಷೇತ್ರದ ಮತದಾರರಲ್ಲದ ಚುನಾವಣಾ ಪ್ರಚಾರಕರು ಜಿಲ್ಲೆಯಿಂದ ಹೊರಹೋಗಬೇಕು.

ಮತಗಟ್ಟೆಗಳಿಗೆ ಮೊಬೈಲ್ ಫೋನ್, ಕಾರ್ಡ್‌ಲೆಸ್ ಫೋನ್ ಹಾಗೂ ಇತರ ಎಲೆಕ್ಟ್ರಾನಿಕ್ ಉಪಕರಣಗಳನ್ನು ತೆಗೆದುಕೊಂಡು ಹೋಗುವುದನ್ನು ನಿಷೇಧಿಸಲಾಗಿದೆ. ಚುನಾವಣಾ ಕಾರ್ಯಕ್ಕೆ ಸಂಬಂಧಿಸಿದಂತೆ ಚುನಾವಣಾಧಿಕಾರಿಗಳಿಂದ ಅನುಮತಿ ಪಡೆದ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಈ ನಿರ್ಬಂಧದಿಂದ ವಿನಾಯಿತಿ ನೀಡಲಾಗಿದೆ.

ಮತಗಟ್ಟೆಗಳ 100 ಮೀಟರ್ ವ್ಯಾಪ್ತಿಯಲ್ಲಿ ಚುನಾವಣಾ ಪ್ರಚಾರಕ್ಕೆ ಸಂಬಂಧಿಸಿದ ಪೋಸ್ಟರ್, ಬ್ಯಾನರ್ ಅಥವಾ ಇತರ ವಸ್ತುಗಳನ್ನು ಬಳಸುವಂತಿಲ್ಲ. ಈ ವ್ಯಾಪ್ತಿಯಲ್ಲಿ ಬಹಿರಂಗವಾಗಿ ಘೋಷಣೆ ಕೂಗುವುದು, ಹಾಡು ಹಾಡುವುದು, ವಾದ್ಯ ಬಾರಿಸುವುದು, ಭಾಷಣ ಮಾಡುವುದು, ಸನ್ನೆ ಅಥವಾ ಅಣಕು ಪ್ರದರ್ಶನ ನಡೆಸುವುದು ಹಾಗೂ ಸಾರ್ವಜನಿಕ ಸಭ್ಯತೆ ಮತ್ತು ನೀತಿಗೆ ಧಕ್ಕೆ ತರುವ ಕೃತ್ಯಗಳನ್ನು ನಿಷೇಧಿಸಲಾಗಿದೆ.

### ಮೌನ ಅವಧಿಯಲ್ಲಿ ಪ್ರಚಾರಕ್ಕೆ ಅವಕಾಶವಿಲ್ಲ

ಅಕ್ಟೋಬರ್ 21ರ ಸಂಜೆ 4 ಗಂಟೆಗೆ ಬಹಿರಂಗ ಪ್ರಚಾರ ಅಂತ್ಯಗೊಳ್ಳಲಿದೆ. ಈ ಮೌನ ಅವಧಿಯ ನಂತರ ಮತಕ್ಷೇತ್ರದ ಮತದಾರರಲ್ಲದವರು ಕ್ಷೇತ್ರದ ವ್ಯಾಪ್ತಿಯಿಂದ ಹೊರಹೋಗಬೇಕು. ಜಿಲ್ಲೆಯ ಕಲ್ಯಾಣ ಮಂಟಪಗಳು, ಸಮುದಾಯ ಭವನಗಳು, ವಸತಿಗೃಹಗಳು ಹಾಗೂ ಅತಿಥಿಗೃಹಗಳಲ್ಲಿ ಬಹಿರಂಗ ಪ್ರಚಾರದಲ್ಲಿ ತೊಡಗಿರುವ ಜಿಲ್ಲೆಯ ಹೊರಗಿನವರು ವಾಸ್ತವ್ಯ ಹೂಡುವಂತಿಲ್ಲ. ಈ ಕುರಿತು ಸಂಬಂಧಿಸಿದ ಮಾಲೀಕರು ಪರಿಶೀಲಿಸಿ ಖಚಿತಪಡಿಸಿಕೊಳ್ಳಬೇಕು.

ಮಾದರಿ ನೀತಿ ಸಂಹಿತೆ (ಎಂಸಿಸಿ), ಮಾಧ್ಯಮ ಪ್ರಮಾಣೀಕರಣ ಮತ್ತು ಮೇಲ್ವಿಚಾರಣಾ ಸಮಿತಿ (ಎಂಸಿ–ಎಂಸಿ), ಫ್ಲೈಯಿಂಗ್ ಸ್ಕ್ವಾಡ್ (ಎಫ್‌ಎಸ್‌ಟಿ) ಹಾಗೂ ಪೊಲೀಸ್ ಇಲಾಖೆಯ ಅಧಿಕಾರಿಗಳು ಈ ಕುರಿತು ನಿಗಾ ವಹಿಸಬೇಕು. ಎಲೆಕ್ಟ್ರಾನಿಕ್ ಮಾಧ್ಯಮ, ಮುದ್ರಣ ಮಾಧ್ಯಮ, ಸಾಮಾಜಿಕ ಮಾಧ್ಯಮ, ಹೋಟೆಲ್‌ಗಳು ಮತ್ತು ರೆಸಾರ್ಟ್‌ಗಳ ಮೇಲೂ ನಿಗಾ ಇರಿಸಬೇಕು. ಸಿನಿಮಾಟೋಗ್ರಾಫ್, ದೂರದರ್ಶನ ಅಥವಾ ಇತರ ಉಪಕರಣಗಳ ಮೂಲಕ ಯಾವುದೇ ಚುನಾವಣಾ ವಿಷಯವನ್ನು ಸಾರ್ವಜನಿಕರಿಗೆ ಪ್ರದರ್ಶಿಸುವುದನ್ನು ನಿರ್ಬಂಧಿಸಲಾಗಿದೆ.

ಮತದಾರರನ್ನು ಆಕರ್ಷಿಸುವ ಅಥವಾ ಚುನಾವಣಾ ವಿಷಯವನ್ನು ಪ್ರಚಾರ ಮಾಡುವ ಉದ್ದೇಶದಿಂದ ಸಂಗೀತ ಕಚೇರಿ, ನಾಟಕ ಪ್ರದರ್ಶನ ಅಥವಾ ಇತರ ಮನರಂಜನಾ ಕಾರ್ಯಕ್ರಮಗಳನ್ನು ಆಯೋಜಿಸುವಂತಿಲ್ಲ.

## ಜನಪರ ಮೌಲ್ಯಗಳೇ ಪಕ್ಷದ ಮೂಲ ಧ್ಯೇಯ: ಬಿ.ಕೆ.ಹರಿಪ್ರಸಾದ್

# ಜನರ ನೋವಿಗೆ ಕಾಂಗ್ರೆಸ್ ಧ್ವನಿ

**ವಿಜಯಸಾಕ್ಷಿ ಸುದ್ದಿ, ಗದಗ**

ಜನಸಾಮಾನ್ಯರ ನೋವು–ನಲಿವಿಗೆ ಸ್ಪಂದಿಸುವುದೇ ಕಾಂಗ್ರೆಸ್ ಪಕ್ಷದ ಮೂಲ ಧ್ಯೇಯವಾಗಿದೆ. ಕಾಂಗ್ರೆಸ್ ಕೇವಲ ಅಧಿಕಾರದ ಆಸೆಗಾಗಿ ಕೆಲಸ ಮಾಡುವ ರಾಜಕೀಯ ಪಕ್ಷವಲ್ಲ, ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಐತಿಹಾಸಿಕ ಹಿನ್ನೆಲೆಯುಳ್ಳ ಪಕ್ಷವಾಗಿದೆ. ಬಡವರ ಪರವಾದ ಮೌಲ್ಯ ಮತ್ತು ಆದರ್ಶಗಳನ್ನು ನಿರಂತರವಾಗಿ ಮುನ್ನಡೆಸಿಕೊಂಡು ಬರುತ್ತಿದೆ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಹೇಳಿದರು.

ನಗರದಲ್ಲಿ ಶನಿವಾರ ನಡೆದ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿಯ ನೂತನ ಅಧ್ಯಕ್ಷರ ಪದಗ್ರಹಣ ಸಮಾರಂಭದಲ್ಲಿ ನೂತನ ಅಧ್ಯಕ್ಷರಿಗೆ ಪಕ್ಷದ ಧ್ವಜ ಹಸ್ತಾಂತರಿಸಿ ಅವರು ಮಾತನಾಡಿದರು. ಜನರ ಸಮಸ್ಯೆಗಳಿಗೆ ಸ್ಪಂದಿಸುವುದು, ಬಡವರ ಹಿತ ಕಾಪಾಡುವುದು ಹಾಗೂ ಪಕ್ಷದ ಮೌಲ್ಯ ಮತ್ತು ಆದರ್ಶಗಳನ್ನು ಮುಂದಿನ ಪೀಳಿಗೆಗೂ ತಲುಪಿಸುವುದು ಕಾಂಗ್ರೆಸ್‌ನ ಪ್ರಮುಖ ಆಶಯವಾಗಿದೆ ಎಂದರು.

ಉನ್ನತ ಶಿಕ್ಷಣ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ ಮಾತನಾಡಿ, ಕಾಂಗ್ರೆಸ್ ಪಕ್ಷ ಬಡವರ ಪಕ್ಷವಾಗಿದ್ದು, ಅವರ ಬಗ್ಗೆ ಸದಾ ಕಾಳಜಿ ಹೊಂದಿದೆ. ಬಡವರ ಕಲ್ಯಾಣಕ್ಕಾಗಿ ವಿಶೇಷ ಯೋಜನೆಗಳನ್ನು ಜಾರಿಗೊಳಿಸುತ್ತ ಬಂದಿದೆ ಎಂದರು. ಮಾಜಿ ಪ್ರಧಾನಿ ಇಂದಿರಾ ಗಾಂಧಿ ಅವರ ಕಾಲದಿಂದ ಹಿಡಿದು ಪ್ರಸ್ತುತ ಜಾರಿಯಲ್ಲಿರುವ ಗ್ಯಾರಂಟಿ ಯೋಜನೆಗಳವರೆಗೆ ಬಡವರ ಬದುಕಿಗೆ ನೆರವಾಗುವ ಕಾರ್ಯಕ್ರಮಗಳ ಕುರಿತು ಸುದೀರ್ಘವಾಗಿ ಮಾತನಾಡಿದರು.



**ಜಿಲ್ಲಾ ಕಾಂಗ್ರೆಸ್‌ಗೆ ನೂತನ ಅಧ್ಯಕ್ಷರ ಆಯ್ಕೆಯ ನಂತರ ಪಕ್ಷದಲ್ಲಿ ಹೊಸ ಹುಮ್ಮಸ್ಸು ಮೂಡಿದೆ. ಮುಂಬರುವ ಎಲ್ಲ ಚುನಾವಣೆಗಳಲ್ಲೂ ಗೆಲುವು ಸಾಧಿಸುವ ಮೂಲಕ ಹೊಸ ಇತಿಹಾಸ ನಿರ್ಮಿಸಬೇಕಿದೆ.**

- **ಎಚ್.ಕೆ.ಪಾಟೀಲ,** ಶಾಸಕ, ಗದಗ

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಗದಗ ಶಾಸಕ, ಮಾಜಿ ಸಚಿವ ಎಚ್.ಕೆ.ಪಾಟೀಲ ಮಾತನಾಡಿ, ಜಿಲ್ಲಾ ಕಾಂಗ್ರೆಸ್‌ಗೆ ನೂತನ ಅಧ್ಯಕ್ಷರ ಆಯ್ಕೆಯಾದ ನಂತರ ಪಕ್ಷದಲ್ಲಿ ಹೊಸ ಹುಮ್ಮಸ್ಸು ಮೂಡಿದೆ. ಈ ಉತ್ಸಾಹವನ್ನು ಸಂಘಟನೆಯ ಬಲವಾಗಿ ಪರಿವರ್ತಿಸಿಕೊಂಡು ಮುಂಬರುವ ಎಲ್ಲ ಚುನಾವಣೆಗಳಲ್ಲೂ ಗೆಲುವು ಸಾಧಿಸುವ ಮೂಲಕ ಹೊಸ ಇತಿಹಾಸ ನಿರ್ಮಿಸಬೇಕಿದೆ ಎಂದರು.

ಪಶ್ಚಿಮ ಪದವೀಧರ ಕ್ಷೇತ್ರದ ಕಾಂಗ್ರೆಸ್ ಅಧ್ಯಕ್ಷ ಮೋಹನ ಲಿಂಬಿಕಾಯಿ ಮಾತನಾಡಿ, ಕಾಂಗ್ರೆಸ್ ಪಕ್ಷದ ಸಂಘಟನೆ ಹಾಗೂ ನೂತನ ಅಧ್ಯಕ್ಷರ ಕುರಿತು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡು ಪದವೀಧರ ಕ್ಷೇತ್ರದ ಚುನಾವಣೆಯಲ್ಲಿ ಮತಯಾಚಿಸಿದರು.

ಮಾಜಿ ಶಾಸಕ ಡಿ.ಆರ್.ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿ, ಬಿ.ಕೆ.ಹರಿಪ್ರಸಾದ್ ಅವರಿಗೂ ಗದಗ ಜಿಲ್ಲೆಗೂ ಹಾಗೂ ಕಾಂಗ್ರೆಸ್ ಪಕ್ಷಕ್ಕೂ ಇರುವ ನಂಟು ಮತ್ತು ಐತಿಹಾಸಿಕ ಸಂಬಂಧದ ಕುರಿತು ವಿವರಿಸಿದರು. ಆನಂದ ಗಡ್ಡದೇವರಮಠ, ಐ.ಎಸ್.ಪಾಟೀಲ ಸೇರಿದಂತೆ ಅನೇಕರು ಮಾತನಾಡಿದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಬಿ.ಆರ್.ಯಾವಗಲ್ಲ, ಜಿ.ಎಸ್.ಗಡ್ಡದೇವಮಠ, ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ಸುಜಾತಾ ದೊಡ್ಡಮನಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ ಬಬರ್ಚಿ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ, ಸಚಿನ್ ಪಾಟೀಲ ಹಾಗೂ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು.

ಬಸವರಾಜ ಕಡೇಮನಿ ಕಾರ್ಯಕ್ರಮ ನಿರೂಪಿಸಿದರು. ಬಿ.ಬಿ.ಅಸೂಟಿ ಸ್ವಾಗತಿಸಿದರು.

## ಸ್ಟಿಂಗ್ ಆಪರೇಷನ್ ಕೊಳಕು ರಾಜಕಾರಣ: ರಾಯರಡ್ಡಿ

**ವಿಜಯಸಾಕ್ಷಿ ಸುದ್ದಿ, ಗದಗ**



ರಾಜ್ಯದಲ್ಲಿ ನಡೆಯುತ್ತಿರುವ ಸ್ಟಿಂಗ್ ಆಪರೇಷನ್ ವಿಚಾರ ಕೊಳಕು ರಾಜಕಾರಣವಾಗಿದ್ದು, ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರು ಈ ಮಟ್ಟಕ್ಕೆ ಇಳಿದು ರಾಜಕೀಯ ಮಾಡಬಾರದು ಎಂದು ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ ಆಕ್ರೋಶ ವ್ಯಕ್ತಪಡಿಸಿದರು.

ಗದಗದಲ್ಲಿ ಮಾತನಾಡಿದ ಅವರು, ಈ ವಿಚಾರದಲ್ಲಿ ಯಾರೂ ಮಾತನಾಡಬಾರದು ಎಂಬ ತೀರ್ಮಾನವಾಗಿದೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರಿಗೆ ಈ ಬಗ್ಗೆ ನಿರ್ಧಾರ ಕೈಗೊಳ್ಳುವ ಅಧಿಕಾರ ನೀಡಲಾಗಿದೆ. ತನಿಖೆ ನಡೆಸುವ ಕುರಿತು ಮುಖ್ಯಮಂತ್ರಿಯವರೇ ತೀರ್ಮಾನ ಮಾಡುತ್ತಾರೆ. ಅವರು ಏನು ನಿರ್ಧಾರ ತೆಗೆದುಕೊಳ್ಳುತ್ತಾರೆ ಎಂಬುದು ಗೊತ್ತಿಲ್ಲ ಎಂದರು.

ಇಟ್ ಈಸ್ ನಾಟ್ ಎ ಗುಡ್ ಪಾಲಿಟಿಕ್ಸ್ ಎಂದು ಹೇಳಿದ ರಾಯರೆಡ್ಡಿ, ಇಂತಹ ರಾಜಕೀಯ ಬೆಳವಣಿಗೆಗಳು ಒಳ್ಳೆಯದಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಸಮರ್ಥಿಸಿಕೊಂಡ ಬಸವರಾಜ ರಾಯರೆಡ್ಡಿ, ಸಿದ್ದರಾಮಯ್ಯ ಅವರು ರಾಜ್ಯ ಮಾತ್ರವಲ್ಲ, ಸುಮ್ಮನೆ ಯಾವುದೋ ವಿಚಾರ ಮುಂದಿಟ್ಟುಕೊಂಡು ಅವರ ತೇಜೋವಧೆ ಮಾಡುವ ಹುನ್ನಾರ ನಡೆಯುತ್ತಿದೆ ಎಂದು ಆರೋಪಿಸಿದರು.

## ಗದಗದಲ್ಲಿ ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಹೊಸ ಬಾಂಬ್

# ಸ್ಟಿಂಗ್ ಆಪರೇಷನ್ ಪಿತಾಮಹ ಮೋದಿ!

**ವಿಜಯಸಾಕ್ಷಿ ಸುದ್ದಿ, ಗದಗ**

ದೇಶದಲ್ಲಿ ಸ್ಟಿಂಗ್ ಆಪರೇಷನ್‌ನ ಪಿತಾಮಹ ಪ್ರಧಾನಿ ನರೇಂದ್ರ ಮೋದಿ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಆರೋಪಿಸಿದ್ದಾರೆ.

ಗದಗದಲ್ಲಿ ಮಾತನಾಡಿದ ಅವರು, ಗುಜರಾತ್‌ನಲ್ಲಿ ನರೇಂದ್ರ ಮೋದಿ ಅವರ ರಾಜಕೀಯ ಪ್ರತಿಸ್ಪರ್ಧಿಯಾಗಿದ್ದ ಸಂಜಯ್ ಜೋಶಿ ಅವರನ್ನು ಸ್ಟಿಂಗ್ ಆಪರೇಷನ್ ಮೂಲಕ ರಾಜಕೀಯದಿಂದಲೇ ನಿವೃತ್ತಿಯಾಗುವಂತೆ ಮಾಡಲಾಗಿತ್ತು ಎಂದು ಹೇಳಿದರು.

ದೇಶದಲ್ಲಿ ಸ್ಟಿಂಗ್ ಆಪರೇಷನ್‌ನ ಪಿತಾಮಹ ಯಾರಾದರೂ ಇದ್ದರೆ ಅದು ಪ್ರಧಾನಿ ನರೇಂದ್ರ ಮೋದಿ ಎಂದು ಹರಿಪ್ರಸಾದ್ ಹೇಳಿದರು. ಗುಜರಾತ್‌ನಲ್ಲಿ ಸಂಜಯ್ ಜೋಶಿ ಉಸ್ತುವಾರಿ ವಹಿಸಿದ್ದ ಸಂದರ್ಭದಲ್ಲಿ ತಾವೂ ಉಸ್ತುವಾರಿಯಾಗಿದ್ದೆ ಎಂದು ಅವರು ಸ್ಮರಿಸಿದರು.

### ಸಿದ್ದರಾಮಯ್ಯ–ಡಿಕೆಶಿ ಭೇಟಿ ಬಗ್ಗೆ ನನಗೆ ಗೊತ್ತಿಲ್ಲ

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರ ಭೇಟಿಯ ಕುರಿತು ಪ್ರತಿಕ್ರಿಯಿಸಿದ



ಹರಿಪ್ರಸಾದ್, ಇಬ್ಬರ ನಡುವೆ ಏನು ಚರ್ಚೆಯಾಗಿದೆ ಎಂಬುದು ತಮಗೆ ತಿಳಿದಿಲ್ಲ ಎಂದರು.

ನಾನೇನು ತ್ರಿಕಾಲಜ್ಞಾನಿಯಲ್ಲ. ಸಿದ್ದರಾಮಯ್ಯ ಅನುಭವಿ ರಾಜಕಾರಣಿ. ಏನು ಮಾಡಬೇಕು ಎಂಬುದನ್ನು ಅವರೇ ತೀರ್ಮಾನಿಸುತ್ತಾರೆ. ಈ ವಿಚಾರದಲ್ಲಿ ನಾವೇನೂ ಮಾಡುವುದಿಲ್ಲ ಎಂದು ಹೇಳಿದರು.

ರಾಜ್ಯ ಸರ್ಕಾರವನ್ನು ಜೆಡಿಎಸ್ 'ಸ್ಟಿಂಗ್ ಸರ್ಕಾರ' ಎಂದು ಆರೋಪಿಸಿರುವ ವಿಚಾರವಾಗಿ ಮಾತನಾಡಿದ ಹರಿಪ್ರಸಾದ್, ಈ ಆರೋಪದ ಬಗ್ಗೆ ತಾವು ಏನನ್ನೂ ಹೇಳುವುದಿಲ್ಲ. ಈಗಾಗಲೇ ತನಿಖೆ ನಡೆಯುತ್ತಿದ್ದು, ತನಿಖೆಯ ಸಂದರ್ಭದಲ್ಲಿ ಈ ಕುರಿತು ಪ್ರತಿಕ್ರಿಯಿಸುವುದಿಲ್ಲ ಎಂದರು.

ದಸರಾ ಬಳಿಕ ಜೆಡಿಎಸ್ ಹೋರಾಟ ನಡೆಸುವ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಪ್ರಜಾಪ್ರಭುತ್ವದಲ್ಲಿ ಎಲ್ಲರಿಗೂ ಹೋರಾಟ ಮಾಡುವ ಹಕ್ಕಿದೆ. ಅದೇ ರೀತಿ ಸಿಜೆಪಿ ಮತ್ತು ನೇಹಾ ಅವರು ಹೋರಾಟ ನಡೆಸುತ್ತಿದ್ದಾರೆ. ಅವರಿಗೆ ಹೋರಾಟ ಮಾಡಲು ಅವಕಾಶ ಮಾಡಿಕೊಡಬೇಕು ಎಂದು ಹೇಳಿದರು.

## ಪ್ರಕ್ರಿಯೆ ಸರಳೀಕರಣ, ಕುಂದುಕೊರತೆ ನಿವಾರಣೆಗೆ ಕ್ರಮ: ಯೋಗೇಶ್ ಬವೇಜಾ

# ಪತ್ರಿಕೆಗಳ ನೋಂದಣಿ ಸಂಪೂರ್ಣ ಆನ್‌ಲೈನ್



**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಪತ್ರಿಕೆಗಳು ಮತ್ತು ನಿಯತಕಾಲಿಕೆಗಳ ನೋಂದಣಿ ಪ್ರಕ್ರಿಯೆಯನ್ನು ಸರಳಗೊಳಿಸಲು ಕೇಂದ್ರ ಸರ್ಕಾರ ಪತ್ರಿಕಾ ಮತ್ತು ನಿಯತಕಾಲಿಕೆಗಳ ನೋಂದಣಿ ಕಾಯ್ದೆ–2023 ಜಾರಿಗೆ ತಂದಿದ್ದು, ಇನ್ನು ಮುಂದೆ ಎಲ್ಲ ಪ್ರಕ್ರಿಯೆಗಳು ಪ್ರೆಸ್ ಸೇವಾ ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ನಡೆಯಲಿವೆ ಎಂದು ಭಾರತದ ಪತ್ರಿಕಾ ನೋಂದಣಿಯ ಪ್ರಧಾನ ಮಹಾನಿರ್ದೇಶಕ ಯೋಗೇಶ್ ಕುಮಾರ್ ಬವೇಜಾ ತಿಳಿಸಿದರು.

ವಾರ್ತಾ ಮತ್ತು ಪ್ರಸಾರ ಸಚಿವಾಲಯದ ವಾರ್ತಾ ಶಾಖೆ ಹಾಗೂ ರಾಜ್ಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಯೋಗದಲ್ಲಿ ಬೆಂಗಳೂರಿನ ವಾರ್ತಾಸೌಧದಲ್ಲಿ ಆಯೋಜಿಸಿದ್ದ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು. ಹಿಂದೆ ಹೊಸ ಪತ್ರಿಕೆ ಆರಂಭಿಸಲು ತಿಂಗಳುಗಳಿಂದ ವರ್ಷಗಳವರೆಗೆ ಸಮಯ ಬೇಕಾಗುತ್ತಿತ್ತು. ಈಗ ನೋಂದಣಿ ಪ್ರಕ್ರಿಯೆ ಸರಳಗೊಂಡಿದ್ದು, ಅರ್ಜಿ ಸಲ್ಲಿಸಿದ ಮೂರು ತಿಂಗಳೊಳಗೆ ಪತ್ರಿಕೆ ಆರಂಭಿಸಲು ಸಾಧ್ಯವಿದೆ. ಅಂತಿಮ ಶೀರ್ಷಿಕೆ ಅನುಮೋದನೆಯಾದ ಬಳಿಕ 12 ತಿಂಗಳೊಳಗೆ ಪ್ರಕಟಣೆ ಆರಂಭಿಸುವುದು ಕಡ್ಡಾಯ ಎಂದರು.

ವಾರ್ತಾ ಇಲಾಖೆಯ ಕಾರ್ಯದರ್ಶಿ ಜೆ. ಮಂಜುನಾಥ್ ಮಾತನಾಡಿ, ಮಾಧ್ಯಮಗಳು ನಕಾರಾತ್ಮಕ ಸುದ್ದಿಗಳಿಗಷ್ಟೇ ಆದ್ಯತೆ ನೀಡದೆ, ಆಶಾದಾಯಕ ಹಾಗೂ ಅಭಿವೃದ್ಧಿ ಪತ್ರಿಕೋದ್ಯಮಕ್ಕೆ ಒತ್ತು ನೀಡಬೇಕು ಎಂದರು. ಪತ್ರಿಕೆಗಳ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ನೋಂದಣಿ, ಹಾಜರಾತಿ ಮತ್ತು ಪ್ರಸಾರ ಸಂಖ್ಯೆಗಳ ಪರಿಶೀಲನೆ ಅಗತ್ಯವಿದೆ. ತಂತ್ರಜ್ಞಾನ ಬೆಳವಣಿಗೆಯ ಹಿನ್ನೆಲೆಯಲ್ಲಿ ಪತ್ರಿಕೆಗಳ ಹಾಜರಾತಿ ದೃಢೀಕರಣಕ್ಕೆ 48 ಗಂಟೆಗಳ ಕಾಲಾವಕಾಶದ ಅಗತ್ಯವಿದೆಯೇ ಎಂಬುದನ್ನು ಪರಿಶೀಲಿಸಬೇಕು ಎಂದು ಅಭಿಪ್ರಾಯಪಟ್ಟರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತ ಎಂ.ಎನ್. ಅನುಚೇತ್ ಮಾತನಾಡಿ, ಪತ್ರಿಕೆಗಳಿಗೆ ನೀಡುವ ಪ್ರೋತ್ಸಾಹ ಜಾಹೀರಾತಿನ ವೆಚ್ಚ 2022ರಲ್ಲಿ 44 ಕೋಟಿ ರೂ. ಇದ್ದದ್ದು, 2025–26ರಲ್ಲಿ 82 ಕೋಟಿ ರೂ.ಗೆ ಏರಿಕೆಯಾಗಿದೆ. ನಿಜವಾಗಿಯೂ ಪತ್ರಿಕೋದ್ಯಮವನ್ನೇ ವೃತ್ತಿಯಾಗಿಸಿಕೊಂಡವರಿಗೆ ಜಾಹೀರಾತು ತಲುಪುವಂತೆ ಕ್ರಮ ಕೈಗೊಳ್ಳಬೇಕು ಎಂದರು. ಡಿಜಿಟಲ್ ಯುಗದಲ್ಲಿ 'ಪತ್ರಕರ್ತ' ಎಂಬುದಕ್ಕೆ ಸ್ಪಷ್ಟ ವ್ಯಾಖ್ಯಾನ ನೀಡುವ ಕುರಿತು ರಾಷ್ಟ್ರಮಟ್ಟದಲ್ಲಿ ಚರ್ಚೆ ನಡೆಯಬೇಕಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಬೆಂಗಳೂರಿನ ದೂರದರ್ಶನ ಕೇಂದ್ರದ ಮುಖ್ಯಸ್ಥ ಬಿ.ಕೆ. ಕೇಶವಮೂರ್ತಿ, ಎನ್‌ಐಸಿ ಉಪನಿರ್ದೇಶಕ ಗೌರವ್ ಶರ್ಮಾ, ವಾರ್ತಾ ಇಲಾಖೆಯ ಅಧಿಕಾರಿಗಳು, ಜಿಲ್ಲಾ ವಾರ್ತಾಧಿಕಾರಿಗಳು ಹಾಗೂ ಪತ್ರಿಕೆಗಳ ಮಾಲೀಕರು, ಸಂಪಾದಕರು ಮತ್ತು ಮುದ್ರಕರು ಉಪಸ್ಥಿತರಿದ್ದರು.

## ಸತ್ಯ, ನಿಷ್ಪಕ್ಷಪಾತ ವರದಿಗಾರಿಕೆಗೆ ಶಾಸಕ ಸಿ.ಸಿ. ಪಾಟೀಲ ಕರೆ

# ನಿರ್ಭೀತ ಪತ್ರಿಕೋದ್ಯಮವೇ ಪ್ರಜಾಪ್ರಭುತ್ವದ ಶಕ್ತಿ



**ವಿಜಯಸಾಕ್ಷಿ ಸುದ್ದಿ, ಗದಗ**

ನಿರ್ಭೀತ ಹಾಗೂ ನಿಷ್ಪಕ್ಷಪಾತ ಪತ್ರಿಕೋದ್ಯಮ ಪ್ರಜಾಪ್ರಭುತ್ವದ ಬಲವರ್ಧನೆಗೆ ಆಧಾರ. ಸಮಾಜದ ಆಗುಹೋಗುಗಳನ್ನು ಜನರಿಗೆ ತಲುಪಿಸುವುದರ ಜತೆಗೆ, ಜನರ ಸಮಸ್ಯೆಗಳಿಗೆ ಧ್ವನಿಯಾಗಿ ಸರ್ಕಾರದ ಗಮನ ಸೆಳೆಯುವ ಮಹತ್ವದ ಜವಾಬ್ದಾರಿ ಪತ್ರಕರ್ತರ ಮೇಲಿದೆ ಎಂದು ಶಾಸಕ ಸಿ.ಸಿ. ಪಾಟೀಲ ಹೇಳಿದರು.

ನಗರದ ತೋಂಟದಾರ್ಯ ಮಠದ ಶಿವಾನುಭವ ಮಂಟಪದಲ್ಲಿ ಶನಿವಾರ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾ ಘಟಕ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ, ಪ್ರತಿಭಾ ಪುರಸ್ಕಾರ ಹಾಗೂ ಟ್ರೋಫಿ ವಿತರಣೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಪತ್ರಕರ್ತರು ಜನರು ಮತ್ತು ಆಡಳಿತದ ನಡುವಿನ ಸಂಪರ್ಕ ಸೇತುವೆಯಾಗಿದ್ದಾರೆ. ಸಾರ್ವಜನಿಕ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಪ್ರಯತ್ನಿಸುವುದರ

**ಸಮಾಜದಲ್ಲಿ ಸಮಾನತೆ, ಸೌಹಾರ್ದ ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸುವಲ್ಲಿ ಪತ್ರಿಕಾರಂಗದ ಪಾತ್ರ ಮಹತ್ವದ್ದಾಗಿದೆ. ಪತ್ರಕರ್ತರು ವೃತ್ತಿಯ ಘನತೆ ಕಾಪಾಡಿಕೊಂಡು ಸಮಾಜದ ಹಿತಕ್ಕಾಗಿ ನಿರ್ಭೀತವಾಗಿ ಕಾರ್ಯನಿರ್ವಹಿಸಬೇಕು.–**

-**ಶಿವಾನಂದ ತಗಡೂರ,** ರಾಜ್ಯಾಧ್ಯಕ್ಷರು, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ

ಜತೆಗೆ, ಜನರಿಗೆ ನಿಖರ ಮಾಹಿತಿ ನೀಡುವುದು ಪತ್ರಿಕಾರಂಗದ ಪ್ರಮುಖ ಹೊಣೆಗಾರಿಕೆ. ಕೋವಿಡ್ ಸಂಕಷ್ಟದ ಸಂದರ್ಭದಲ್ಲೂ ಪತ್ರಕರ್ತರು ಮಾಹಿತಿ ಮತ್ತು ಜಾಗೃತಿ ಮೂಡಿಸುವಲ್ಲಿ ಮಹತ್ವದ ಸೇವೆ ಸಲ್ಲಿಸಿದ್ದಾರೆ. ಸಂವಿಧಾನದ ಆಶಯಗಳನ್ನು ಎತ್ತಿಹಿಡಿದು ಸತ್ಯ, ಪ್ರಾಮಾಣಿಕತೆ ಹಾಗೂ ಸಾಮಾಜಿಕ ಬದ್ಧತೆಯಿಂದ ಕಾರ್ಯನಿರ್ವಹಿಸಬೇಕು ಎಂದರು.

⏩ 2

## ಮತದಾನದಲ್ಲಿ ಲೋಪಕ್ಕೆ ಅವಕಾಶ ಬೇಡ



**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಪಶ್ಚಿಮ ಪದವೀಧರ ಮತಕ್ಷೇತ್ರದ ಚುನಾವಣೆಯ ಮತದಾನ ಅಕ್ಟೋಬರ್ 23ರಂದು ನಡೆಯಲಿದ್ದು, ವ್ಯವಸ್ಥಿತ, ಸುಗಮ ಹಾಗೂ ಶಾಂತಿಯುತ ಮತದಾನಕ್ಕೆ ಅಗತ್ಯ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶನಿವಾರ ಚುನಾವಣೆಗೆ ಸಂಬಂಧಿಸಿದ ನೋಡಲ್ ಅಧಿಕಾರಿಗಳು ಹಾಗೂ ತಾಲೂಕು ತಹಶೀಲ್ದಾರರೊಂದಿಗೆ ನಡೆದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಚುನಾವಣಾ ಕರ್ತವ್ಯಕ್ಕೆ ನಿಯೋಜಿಸಲಾದ ಅಧಿಕಾರಿಗಳು ಮತ್ತು ಸಿಬ್ಬಂದಿ ತಮ್ಮ ಜವಾಬ್ದಾರಿಯನ್ನು ಸಮರ್ಪಕವಾಗಿ ನಿರ್ವಹಿಸಿ ಚುನಾವಣಾ ಪ್ರಕ್ರಿಯೆ ಯಶಸ್ವಿಗೊಳಿಸಬೇಕು. ಜಿಲ್ಲೆಯಲ್ಲಿ 27 ಮತಗಟ್ಟೆಗಳಿದ್ದು, ಎಲ್ಲೆಡೆ ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲಸೌಕರ್ಯ ಕಲ್ಪಿಸಬೇಕು. ಮತದಾರರಿಗೆ ಯಾವುದೇ ತೊಂದರೆಯಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮುಕುಲ್ ಜೈನ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಎಚ್.ಎನ್., ಅಪರ ಜಿಲ್ಲಾಧಿಕಾರಿ ಡಾ. ದುರ್ಗೇಶ್ ಕೆ.ಆರ್., ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಮುಖ್ಯ ಯೋಜನಾಧಿಕಾರಿ ಎ.ಎ. ಕಂಬಾಳಿಮಠ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ಡಿಡಿಎಲ್‌ಆರ್ ರುದ್ರನಗೌಡ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

27 ಮತಗಟ್ಟೆಗಳಲ್ಲೂ ಅಗತ್ಯ ಮೂಲಸೌಕರ್ಯ ಕಲ್ಪಿಸಿ, ಚುನಾವಣಾ ಆಯೋಗದ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಮತದಾರರಿಗೆ ತೊಂದರೆಯಾಗದಂತೆ ವ್ಯವಸ್ಥಿತ, ಸುಗಮ ಹಾಗೂ ಶಾಂತಿಯುತ ಮತದಾನಕ್ಕೆ ಕ್ರಮ ವಹಿಸಬೇಕು.



ಬೆಳಗಾವಿಯ ಕಿತ್ತೂರಿಗೆ ಕಬ್ಬಿನ ಕನಿಷ್ಠ ಬೆಂಬಲ ಬೆಲೆ ಹೆಚ್ಚಳಕ್ಕೆ ಆಗ್ರಹಿಸಿ ಪಾದಯಾತ್ರೆ ನಡೆಸುತ್ತಿದ್ದ ಕಬ್ಬು ಬೆಳೆಗಾರರನ್ನು ಭೇಟಿ ಮಾಡಲು ಆಗಮಿಸಿದ ಸಿಎಂ

## ಪರಿಸರ ಸಂರಕ್ಷಣೆಯ ಪ್ರಾಯೋಗಿಕ ಅರಿವು ಮೂಡಿಸಿದ ಭೇಟಿ

# ಕಪ್ಪತ್ತಗುಡ್ಡದಲ್ಲಿ ರಾಜ್ಯಮಟ್ಟದ ಶಿಕ್ಷಕರ ಚಾರಣ









**ವಿಜಯಸಾಕ್ಷಿ ಸುದ್ದಿ, ಡಂಬಳ**

ವಿದ್ಯಾರ್ಥಿಗಳಲ್ಲಿ ಪರಿಸರ ಪ್ರೀತಿ ಬೆಳೆಸುವ ಮೂಲಕ ಮುಂದಿನ ಪೀಳಿಗೆಗೆ ಪ್ರಕೃತಿ ಸಂರಕ್ಷಣೆಯ ಮಹತ್ವ ತಿಳಿಸುವಲ್ಲಿ ಇಕೋ ಕ್ಲಬ್‌ಗಳು ಪ್ರಮುಖ ಪಾತ್ರ ವಹಿಸಲಿವೆ. ಈ ನಿಟ್ಟಿನಲ್ಲಿ ಕಪ್ಪತ್ತಗುಡ್ಡದಲ್ಲಿ ಹಮ್ಮಿಕೊಂಡ ರಾಜ್ಯಮಟ್ಟದ ಶಿಕ್ಷಕರ ಚಾರಣವು ಪರಿಸರ ಶಿಕ್ಷಣದ ಪ್ರಾಯೋಗಿಕ ಅನುಭವ ನೀಡುವ ಮಹತ್ವದ ಕಾರ್ಯಕ್ರಮವಾಗಿದೆ ಎಂದು ಮುಂಡರಗಿ ಕಪ್ಪತ್ತಗುಡ್ಡ ಅರಣ್ಯ ವಲಯದ ಆರ್‌ಎಫ್‌ಒ ಮಂಜುನಾಥ ಮೇಗಲಮನಿ ಹೇಳಿದರು.

ಡಂಬಳ ಹೋಬಳಿಯ ಕಪ್ಪತ್ತಗುಡ್ಡದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಆಯ್ದ ಶಿಕ್ಷಕರು ಚಾರಣ ಕೈಗೊಂಡರು. ಈ ಸಂದರ್ಭದಲ್ಲಿ ಗುಡ್ಡದ ನೈಸರ್ಗಿಕ ಸೌಂದರ್ಯ, ಅಪರೂಪದ ಸಸ್ಯಸಂಪತ್ತು, ವನ್ಯಜೀವಿಗಳು ಹಾಗೂ ಜೀವವೈವಿಧ್ಯದ ಮಹತ್ವದ ಕುರಿತು ಶಿಕ್ಷಕರಿಗೆ ಮಾಹಿತಿ ನೀಡಲಾಯಿತು.

ಶಾಲಾ ಹಂತದಲ್ಲಿ ಪರಿಸರ ಸಂರಕ್ಷಣೆ, ಅರಣ್ಯ ಬೆಳೆಸುವಿಕೆ, ವನ್ಯಜೀವಿಗಳ ರಕ್ಷಣೆ ಹಾಗೂ ಪ್ರಕೃತಿಯ ಬಗ್ಗೆ ವಿದ್ಯಾರ್ಥಿಗಳಲ್ಲಿ ಆಸಕ್ತಿ ಬೆಳೆಸುವಂತಹ ಚಟುವಟಿಕೆಗಳನ್ನು ಹಮ್ಮಿಕೊಳ್ಳುವ ಕುರಿತು ಶಿಕ್ಷಕರು ಮಂಜುನಾಥ ಮೇಗಲಮನಿ ಅವರಿಂದ ಮಾಹಿತಿ ಪಡೆದುಕೊಂಡರು.

ಚಿಕ್ಕಮಗಳೂರು, ಹಾಸನ, ಬೆಂಗಳೂರು, ಕಲಬುರಗಿ, ಕೊಪ್ಪಳ, ದಾಂಡೇಲಿ ಸೇರಿದಂತೆ ರಾಜ್ಯದ ವಿವಿಧ ಭಾಗಗಳಿಂದ ಆಗಮಿಸಿದ್ದ ಶಿಕ್ಷಕರು ಚಾರಣದಲ್ಲಿ ಪಾಲ್ಗೊಂಡಿದ್ದರು. ಶಾಲೆಗಳಲ್ಲಿ ಇಕೋ ಕ್ಲಬ್‌ಗಳ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು ಹಾಗೂ ವಿದ್ಯಾರ್ಥಿಗಳಲ್ಲಿ ಪರಿಸರ ಸಂರಕ್ಷಣೆಯ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಶಿಕ್ಷಕರು ಸಂಪನ್ಮೂಲ ವ್ಯಕ್ತಿಗಳಾಗಿ ಕಾರ್ಯನಿರ್ವಹಿಸಲು ಅಗತ್ಯವಾದ ಅನುಭವ ಮತ್ತು ಅರಿವು ಮೂಡಿಸುವಲ್ಲಿ ಚಾರಣ ಸಹಕಾರಿಯಾಯಿತು. ರಾಜ್ಯದ ವಿವಿಧ ಭಾಗಗಳ ಶಿಕ್ಷಕರು ಹಾಗೂ ಕಪ್ಪತ್ತಗುಡ್ಡದ ಅರಣ್ಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

---

## ಸಣ್ಣ ಸುದ್ದಿಗಳು

### ಮಣ್ಣಿನಲ್ಲಿ ತೇವಾಂಶ ಖಚಿತ ಪಡಿಸಿಕೊಂಡೇ ಬಿತ್ತನೆ ಮಾಡಿ

**ವಿಜಯಸಾಕ್ಷಿ ಸುದ್ದಿ, ಗದಗ**

2026–27ನೇ ಸಾಲಿನ ಹಿಂಗಾರು ಹಂಗಾಮು ಆರಂಭವಾಗಿದ್ದು, ಜಿಲ್ಲೆಯ ರೈತ ಸಂಪರ್ಕ ಕೇಂದ್ರಗಳು ಹಾಗೂ ಹೆಚ್ಚುವರಿ ಬೀಜ ವಿತರಣಾ ಕೇಂದ್ರಗಳ ಮೂಲಕ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ವಿತರಿಸಲಾಗುತ್ತಿದೆ.

ಕಡಲೆ, ಜೋಳ, ಶೇಂಗಾ ಹಾಗೂ ಗೋಧಿ ಸೇರಿದಂತೆ ಪ್ರಮುಖ ಬೆಳೆಗಳ ಬೀಜಗಳನ್ನು ರೈತರಿಗೆ ಒದಗಿಸಲಾಗುತ್ತಿದ್ದು, ಜಿಲ್ಲೆಯಲ್ಲಿ ಯಾವುದೇ ಬಿತ್ತನೆ ಬೀಜದ ಕೊರತೆಯಿಲ್ಲ ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಎಲ್ಲ ವರ್ಗದ ರೈತರಿಗೆ ಗರಿಷ್ಠ ಐದು ಎಕರೆ ಅಥವಾ ರೈತರ ಭೂ ಹಿಡುವಳಿಗೆ ಅನುಗುಣವಾಗಿ ರಿಯಾಯಿತಿ ದರದಲ್ಲಿ ಬೀಜ ವಿತರಿಸಲಾಗುತ್ತಿದೆ. ಜಿಲ್ಲೆಯ ಅಗತ್ಯಕ್ಕೆ ತಕ್ಕಂತೆ ವಿವಿಧ ಬೆಳೆಗಳ ಬಿತ್ತನೆ ಬೀಜಗಳನ್ನು ದಾಸ್ತಾನು ಮಾಡಿಕೊಳ್ಳಲಾಗಿದೆ.

ಈಗಾಗಲೇ ಜಿಲ್ಲೆಯಲ್ಲಿ 28,123 ಕ್ವಿಂಟಲ್ ಕಡಲೆ ಬಿತ್ತನೆ ಬೀಜ ಹಾಗೂ 143 ಕ್ವಿಂಟಲ್ ಹಿಂಗಾರಿ ಜೋಳದ ಬಿತ್ತನೆ ಬೀಜಗಳನ್ನು ರಿಯಾಯಿತಿ ದರದಲ್ಲಿ ರೈತರಿಗೆ ವಿತರಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಮಳೆಯಿಲ್ಲದೆ ಮಣ್ಣಿನಲ್ಲಿ ತೇವಾಂಶದ ಕೊರತೆ ಉಂಟಾಗಿರುವ ಹಿನ್ನೆಲೆಯಲ್ಲಿ ರೈತರು ಎಚ್ಚರಿಕೆ ವಹಿಸಬೇಕು. ಯಾವುದೇ ಬೆಳೆಯನ್ನು ಬಿತ್ತನೆ ಮಾಡುವ ಮೊದಲು ಮಣ್ಣಿನಲ್ಲಿ ಅಗತ್ಯ ತೇವಾಂಶ ಇರುವುದನ್ನು ಖಚಿತಪಡಿಸಿಕೊಂಡು ಬಿತ್ತನೆ ಕಾರ್ಯ ಕೈಗೊಳ್ಳಬೇಕು ಎಂದು ಜಂಟಿ ಕೃಷಿ ನಿರ್ದೇಶಕರು ಸಲಹೆ ನೀಡಿದ್ದಾರೆ.

### ರಾಷ್ಟ್ರೀಯ ಶೂಟಿಂಗ್‌ನಲ್ಲಿ ಸಿದ್ಧಾರ್ಥನಿಗೆ ಬೆಳ್ಳಿ, ಮನ್ವಿತಾಗೆ ಕಂಚು

**ವಿಜಯಸಾಕ್ಷಿ ಸುದ್ದಿ, ಗದಗ**

ಶೂಟಿಂಗ್ ಕ್ರೀಡೆಯಲ್ಲಿ ಗದಗದ ಪ್ರತಿಭೆಗಳು ರಾಷ್ಟ್ರಮಟ್ಟದಲ್ಲಿ ಮಿಂಚಿವೆ. ಗದಗ ಸ್ಪೋರ್ಟ್ಸ್ ಶೂಟಿಂಗ್ ಅಕಾಡೆಮಿಯಲ್ಲಿ ತರಬೇತಿ ಪಡೆಯುತ್ತಿರುವ ಸಿದ್ಧಾರ್ಥ ಎಂ. ಬಡ್ನಿ ರಾಷ್ಟ್ರೀಯ ಮಟ್ಟದ ಸ್ಪರ್ಧೆಯಲ್ಲಿ ಬೆಳ್ಳಿ ಪದಕ ಗೆದ್ದರೆ, ಮನ್ವಿತಾ ಎಂ. ಬಡ್ನಿ ಮೈಸೂರು ದಸರಾ ಸಿಎಂ ಕಪ್‌ನಲ್ಲಿ ಕಂಚಿನ ಪದಕ ಪಡೆದು ಸಾಧನೆ ಮಾಡಿದ್ದಾರೆ.

ತೆಲಂಗಾಣದ ನಾಚಾರಂನಲ್ಲಿರುವ ಡೆಲ್ಲಿ ಪಬ್ಲಿಕ್ ಸ್ಕೂಲ್‌ನಲ್ಲಿ ಅಕ್ಟೋಬರ್ 11ರಿಂದ 14ರವರೆಗೆ ನಡೆದ ಸಿಬಿಎಸ್‌ಇ ಸ್ಕೂಲ್ ನ್ಯಾಷನಲ್ ಶೂಟಿಂಗ್ ಸ್ಪರ್ಧೆಯ ವೈಯಕ್ತಿಕ ವಿಭಾಗದ 10 ಮೀಟರ್ ಏರ್ ಪಿಸ್ತೂಲ್ ಸ್ಪರ್ಧೆಯಲ್ಲಿ ಸಿದ್ಧಾರ್ಥ ಎಂ. ಬಡ್ನಿ ಬೆಳ್ಳಿ ಪದಕ ಗೆದ್ದಿದ್ದಾನೆ. ಗದುಗಿನ ಕೆಎಲ್‌ಇ ಶಾಲೆಯಲ್ಲಿ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಸಿದ್ಧಾರ್ಥನ ಸಾಧನೆ ಶಾಲೆ ಹಾಗೂ ಅಕಾಡೆಮಿಗೆ ಹೆಮ್ಮೆ ತಂದಿದೆ.

ಇದೇ ವೇಳೆ, ಅಕ್ಟೋಬರ್ 11 ಮತ್ತು 12ರಂದು ಮೈಸೂರಿನ ಜೈ ಚಾಮುಂಡಿ ಟಾರ್ಗೆಟ್ ಶೂಟಿಂಗ್ ಅಕಾಡೆಮಿಯಲ್ಲಿ ನಡೆದ ಮೈಸೂರು ದಸರಾ ಸಿಎಂ ಕಪ್ ಶೂಟಿಂಗ್ ಸ್ಪರ್ಧೆಯ 10 ಮೀಟರ್ ರೈಫಲ್ ಗ್ರೂಪ್ ವಿಭಾಗದಲ್ಲಿ ಮನ್ವಿತಾ ಎಂ. ಬಡ್ನಿ ಕಂಚಿನ ಪದಕ ತನ್ನದಾಗಿಸಿಕೊಂಡಿದ್ದಾಳೆ.

ಇಬ್ಬರೂ ಕ್ರೀಡಾಪಟುಗಳ ಸಾಧನೆಗೆ ಗದಗ ಸ್ಪೋರ್ಟ್ಸ್ ಶೂಟಿಂಗ್ ಅಕಾಡೆಮಿಯ ಅಧ್ಯಕ್ಷರಾದ ಮುರುಘರಾಜೇಂದ್ರ ಬಡ್ನಿ, ಪ್ರತಿಭಾ ಬಡ್ನಿ, ವಿಜಯಕುಮಾರ್ ಗಡ್ಡಿ, ಶ್ರೀನಿವಾಸ್ ಹುಯಿಲಗೋಳ, ಗಣೇಶ್ ಕಬಾಡಿ, ವರಲಕ್ಷ್ಮಿ ಹೊಂಬಾಳಿ, ಸತೀಶ್ ಚಿಕ್ಕನ್‌ಗೌಡರ ಹಾಗೂ ತರಬೇತುದಾರ ಬಸವರಾಜ ಹೊಂಬಾಳಿ ಅಭಿನಂದನೆ ಸಲ್ಲಿಸಿದ್ದಾರೆ. ಕೆಎಲ್‌ಇ ಶಾಲೆಯ ಶಿಕ್ಷಕರು ಹಾಗೂ ಸಿಬ್ಬಂದಿಯೂ ಸಿದ್ಧಾರ್ಥನ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

---

## ಹಾಸ್ಯದ ಮೂಲಕ ಸಮಾಜದ ವೈರುಧ್ಯ ಅನಾವರಣಗೊಳಿಸಿದ ಬೀಚಿ ಸಾಹಿತ್ಯ

# ನಗು ಹಿಂದಿನ ಕಣ್ಣೀರಿನ ಬದುಕಿಗೆ ಕನ್ನಡಿ ಹಿಡಿದ ಬೀಚಿ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**



ಬದುಕು ಎಂದರೆ ಬರೀ ಸುಖದ ಪಯಣವಲ್ಲ. ನೋವು, ಸಂಕಟ, ಕಹಿ ಅನುಭವಗಳ ನಡುವೆಯೂ ನಗುತ್ತ ಮುನ್ನಡೆಯುವುದೇ ನಿಜವಾದ ಜೀವನ. ಕೆಲವೊಮ್ಮೆ ಒಂದು ಸಣ್ಣ ನಗು ಮನದ ಭಾರ ಇಳಿಸಿದರೆ, ಹಾಸ್ಯದ ಮಾತು ಸಮಾಜದ ಕಹಿ ವಾಸ್ತವವನ್ನು ಅನಾವರಣಗೊಳಿಸುತ್ತದೆ. ಇಂತಹ ಹಾಸ್ಯದ ಹಲವು ಪದರುಗಳನ್ನು ಬೀಚಿಯವರ ಸಾಹಿತ್ಯದಲ್ಲಿ ಕಾಣಬಹುದು ಎಂದು ನಿವೃತ್ತ ಪ್ರಾಚಾರ್ಯ ಅನಿಲ ವೈದ್ಯ ಹೇಳಿದರು.

ಪಟ್ಟಣದ ಶ್ರೀ ಮರಿಯಪ್ಪ ಬಾಳಪ್ಪ ಕಳಕೊಣ್ಣವರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಐಕ್ಯೂಎಸಿ ಹಾಗೂ ಬೀಚಿ ಬಳಗದ ಸಂಯುಕ್ತ ಆಶ್ರಯದಲ್ಲಿ, ಕಾಲೇಜು ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ಆಯೋಜಿಸಿದ್ದ ಒಂದು ದಿನದ ರಾಜ್ಯಮಟ್ಟದ ವಿಚಾರ ಸಂಕಿರಣದಲ್ಲಿ 'ಬೀಚಿ ಜೀವನ ಮತ್ತು ಸಾಹಿತ್ಯ' ಕುರಿತು ವಿಶೇಷ ಉಪನ್ಯಾಸ ನೀಡಿದರು.

ಕಾಲೇಜಿನ ಪ್ರಾಚಾರ್ಯೆ ಡಾ. ಕಸ್ತೂರಿ ಬಿ. ದಳವಾಯಿ ಮಹಿಳಾ ಹಾಸ್ಯ ಸಾಹಿತ್ಯ ಕುರಿತು ಮಾತನಾಡಿ, ಬದುಕಿನಲ್ಲಿ ಎಷ್ಟೇ ನೋವು–ಸಂಕಟಗಳಿದ್ದರೂ ಮುಖದಲ್ಲಿ ಮಂದಸ್ಮಿತ ಉಳಿಸಿಕೊಳ್ಳುವುದು ಒಂದು ದೊಡ್ಡ ಕಲೆ.

> ಬೀಚಿಯವರ ಸಾಹಿತ್ಯ ಓದುಗರನ್ನು ನಗಿಸುವುದಷ್ಟೇ ಅಲ್ಲ, ಸಮಾಜದ ವೈರುಧ್ಯಗಳನ್ನು ತೆರೆದಿಡುವ ಮೂಲಕ ಆತ್ಮಾವಲೋಕನಕ್ಕೂ ಪ್ರೇರೇಪಿಸುತ್ತದೆ.
>
> – ಅನಿಲ ವೈದ್ಯ, ನಿವೃತ್ತ ಪ್ರಾಚಾರ್ಯ

ಎಂದರು.

ಹಾಸ್ಯ ಲೇಖಕಿ ಟಿ. ಸುನಂದಮ್ಮನವರ ಸಾಹಿತ್ಯವನ್ನು ಪ್ರಸ್ತಾಪಿಸಿದ ಅವರು, ದೈನಂದಿನ ಬದುಕಿನ ಸಾಮಾನ್ಯ ಘಟನೆಗಳಲ್ಲಿಯೇ ಹಾಸ್ಯದ ಬೀಜ ಅಡಗಿರುತ್ತದೆ. ಮಹಿಳೆಯರ ಬದುಕು, ಸಂಸಾರದ ಅನುಭವಗಳು ಹಾಗೂ ಕುಟುಂಬದ ಸನ್ನಿವೇಶಗಳನ್ನು ಹಾಸ್ಯದ ಮೂಲಕ ಕಟ್ಟಿಕೊಡುವುದು ಮಹಿಳಾ ಹಾಸ್ಯ ಸಾಹಿತ್ಯದ ವೈಶಿಷ್ಟ್ಯವಾಗಿದೆ ಎಂದು ವಿವರಿಸಿದರು.

ವಿದ್ಯಾರ್ಥಿನಿ ಪೂಜಾ ಶಿವಣ್ಣವರ ಪ್ರಾರ್ಥಿಸಿದರು. ಡಯಟ್‌ನ ನಿವೃತ್ತ ಉಪನ್ಯಾಸಕ ಕೆ.ಪಿ. ಸಾಲಿಮಠ ನಾಡಗೀತೆ ಹಾಡಿದರು. ಬೀಚಿ ಬಳಗದ ಅಧ್ಯಕ್ಷ ಶಿವಯೋಗಿ ಜಕ್ಕಲಿ ಅಧ್ಯಕ್ಷತೆ ವಹಿಸಿದ್ದರು. ಬಳಗದ ನಿಕಟಪೂರ್ವ ಅಧ್ಯಕ್ಷ ಕೆ.ಎಸ್. ಕಳಕಣ್ಣವರ ವೇದಿಕೆಯ ಮೇಲಿದ್ದರು. ನಿವೃತ್ತ ಶಿಕ್ಷಕ ಎಂ.ಎಸ್. ಧಡೇಸೂರಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ಅಯ್ಯಪ್ಪ ಪೂಜಾರ ಸ್ವಾಗತಿಸಿದರು. ಅಧ್ಯಾಪಕ ಎಸ್.ಎಸ್. ಹೊನ್ನೂರು ನಿರೂಪಿಸಿದರು. ಮಹಾದೇವಪ್ಪ ಬೇವಿನಕಟ್ಟಿ ವಂದಿಸಿದರು.

ಬೀಚಿ ಬಳಗದ ದೊಡ್ಡಯ್ಯ ಅರವಟಿಗಿಮಠ, ಗುರುಪಾದಪ್ಪ ಬೆಲ್ಲದ, ಭರಮಪ್ಪ ತಾಳಿ, ಡಾ. ರಾಜೇಂದ್ರ ಗಚ್ಚಿನಮಠ, ಭಾರತಿ ಶಿರ್ಸಿ, ಚಂದ್ರಶೇಖರ ಕೇಸರಿ, ಎಸ್.ಜಿ. ಗುಳಗಣ್ಣವರ, ಎಸ್.ಕೆ. ಪಾಟೀಲ, ಶಿವಾನಂದ ಗೋಗೇರಿ, ಸಂಗಯ್ಯ ಪ್ರಭುಸ್ವಾಮಿಮಠ, ರಾಚಯ್ಯ ಮಠದ, ವೀರಭದ್ರಪ್ಪ ಕುಂಬಾರ ಸೇರಿದಂತೆ ಸಾಹಿತ್ಯಾಸಕ್ತರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

---

# ನಿರ್ಭೀತ ಪತ್ರಿಕೋದ್ಯಮವೇ ಪ್ರಜಾಪ್ರಭುತ್ವದ ಶಕ್ತಿ

ಮುಂದಿನ ಪುಟದಲ್ಲಿ

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರ ಮಾತನಾಡಿ, ಸಮಾಜದಲ್ಲಿ ಸಮಾನತೆ, ಸೌಹಾರ್ದ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸುವಲ್ಲಿ ಪತ್ರಿಕಾರಂಗದ ಪಾತ್ರ ಮಹತ್ವದ್ದಾಗಿದೆ. ಸತ್ಯ ಮತ್ತು ವೈಚಾರಿಕತೆಯ ನೆಲೆಯಲ್ಲಿ ವೃತ್ತಿಯ ಘನತೆ ಕಾಪಾಡಿಕೊಂಡು ಸಮಾಜದ ಹಿತಕ್ಕಾಗಿ ಪತ್ರಕರ್ತರು ನಿರ್ಭೀತವಾಗಿ ಕಾರ್ಯನಿರ್ವಹಿಸಬೇಕು ಎಂದರು.

ಸಂಘದ ಪ್ರಧಾನ ಕಾರ್ಯದರ್ಶಿ ಜಿ.ಸಿ. ಲೋಕೇಶ ಮಾತನಾಡಿ, ಪತ್ರಕರ್ತರ ಹಿತ ಕಾಯುವುದರ ಜತೆಗೆ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿಯಲ್ಲಿ ಉತ್ತಮ ಸಾಧನೆ ಮಾಡಿದ ಪತ್ರಕರ್ತರ ಮಕ್ಕಳನ್ನು ಗುರುತಿಸಿ ಗೌರವಿಸುವುದು ಶ್ಲಾಘನೀಯ. ಇಂತಹ ಪುರಸ್ಕಾರಗಳು ವಿದ್ಯಾರ್ಥಿಗಳಿಗೆ ಹೆಚ್ಚಿನ ಸಾಧನೆಗೆ ಪ್ರೇರಣೆ ನೀಡುತ್ತವೆ ಎಂದರು.

ಜ.ಡಾ. ತೋಂಟದ ಸಿದ್ಧರಾಮ ಸ್ವಾಮೀಜಿ ಮಾತನಾಡಿ, ಪ್ರಜಾಪ್ರಭುತ್ವದ ಮೌಲ್ಯ, ಸಾಮಾಜಿಕ ನ್ಯಾಯ ಮತ್ತು ಸಮಾನತೆಯನ್ನು ಎತ್ತಿಹಿಡಿಯುವಲ್ಲಿ ಮಾಧ್ಯಮಗಳ ಪಾತ್ರ ಮಹತ್ವದ್ದಾಗಿದೆ. ಸಮಾಜಮುಖಿ ಕಾರ್ಯಗಳನ್ನು ಗುರುತಿಸಿ ಪ್ರೋತ್ಸಾಹಿಸುವ ಮೂಲಕ ಜನರಲ್ಲಿ ಜಾಗೃತಿ ಹಾಗೂ ಸಕಾರಾತ್ಮಕ ಚಿಂತನೆ ಬೆಳೆಸಬೇಕು ಎಂದರು.

ಕಾಂಗ್ರೆಸ್ ಯುವ ಮುಖಂಡ ಕೃಷ್ಣಗೌಡ ಪಾಟೀಲ ಮಾತನಾಡಿ, ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿರುವ ವ್ಯಕ್ತಿಗಳು ಮತ್ತು ಸಂಘಟನೆಗಳ ಸಾಧನೆಗೆ ಪತ್ರಿಕೆಗಳಲ್ಲಿ ಆದ್ಯತೆ ನೀಡಬೇಕು. ಇಂತಹ ವರದಿಗಳು ಇತರರಿಗೂ ಸಮಾಜಸೇವೆಯಲ್ಲಿ ತೊಡಗಲು ಪ್ರೇರಣೆ ನೀಡುತ್ತವೆ ಎಂದು ಸಲಹೆ ನೀಡಿದರು.

ಜಿಲ್ಲಾ ಘಟಕದ ಅಧ್ಯಕ್ಷ ರಾಜು ಹೆಬ್ಬಳ್ಳಿ ಅಧ್ಯಕ್ಷತೆ ವಹಿಸಿದ್ದರು. ಪತ್ರಕರ್ತ ಹಾಗೂ ನ್ಯಾಯವಾದಿ ರವಿಕಾಂತ ಅಂಗಡಿ ಸೇರಿದಂತೆ ಹಲವರನ್ನು ಸನ್ಮಾನಿಸಲಾಯಿತು. ಎಸ್ಸೆಸ್ಸೆಲ್ಸಿ ಮತ್ತು ದ್ವಿತೀಯ ಪಿಯುಸಿಯಲ್ಲಿ ಹೆಚ್ಚು ಅಂಕ ಗಳಿಸಿದ ಜಿಲ್ಲೆಯ ಕಾರ್ಯನಿರತ ಪತ್ರಕರ್ತರ ಮಕ್ಕಳಿಗೆ ತಲಾ ?3,000 ನಗದು ಹಾಗೂ ಪ್ರಮಾಣಪತ್ರ ನೀಡಿ ಪುರಸ್ಕರಿಸಲಾಯಿತು.

ಆ. ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಪ್ರೊ. ಎಸ್.ಎಸ್. ಪಟ್ಟಣಶೆಟ್ಟರ, ಕಾಂಗ್ರೆಸ್ ಮುಖಂಡ ಅಶೋಕ ಮಂದಾಲಿ ಸದಸ್ಯರು ಉಪಸ್ಥಿತರಿದ್ದರು.

---

# ಬೀಜೋಪಚಾರ, ಅಂತರ ಬೆಳೆ ಪದ್ಧತಿಯಿಂದ ಬರ ನಿರ್ವಹಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಹಿಂಗಾರು ಹಂಗಾಮಿನಲ್ಲಿ ಮಳೆಯ ಕೊರತೆಯಿಂದ ಬೆಳೆಗಳಿಗೆ ಅಗತ್ಯ ತೇವಾಂಶ ದೊರೆಯದಿರುವ ಹಿನ್ನೆಲೆಯಲ್ಲಿ ರೈತರು ಬೀಜೋಪಚಾರ, ಅಂತರ ಬೆಳೆ ಪದ್ಧತಿ ಸೇರಿದಂತೆ ಬರ ನಿರ್ವಹಣಾ ಕ್ರಮಗಳನ್ನು ಅನುಸರಿಸಬೇಕು ಎಂದು ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ್ ಸಲಹೆ ನೀಡಿದ್ದಾರೆ.

ಈ ಬಾರಿ ಭೂಮಿಯಲ್ಲಿ ಸಾಕಷ್ಟು ತೇವಾಂಶ ಇಲ್ಲದಿರುವುದರಿಂದ ಮಳೆ ಕಡಿಮೆಯಾಗಿ ಬೆಳೆ ಒಣಗಿದರೂ ಮೇವು ದೊರೆಯುವಂತೆ ಮೇವಿನ ಜೋಳಕ್ಕೆ ಆದ್ಯತೆ ನೀಡಬೇಕು.

ಜೋಳ ಮತ್ತು ಕುಸುಬೆ ಬೀಜಗಳನ್ನು ಬಿತ್ತನೆಗೂ ಮುನ್ನ ಒಂದು ರಾತ್ರಿ ನೀರಿನಲ್ಲಿ ನೆನೆಸಿ, ನಂತರ ನೆರಳಿನಲ್ಲಿ ಒಣಗಿಸಿ ಬೀಜೋಪಚಾರ ಮಾಡಿ ಬಿತ್ತನೆ ಮಾಡುವುದರಿಂದ ಉತ್ತಮ ಮೊಳಕೆ ಬರಲು ಸಹಕಾರಿಯಾಗುತ್ತದೆ ಎಂದು ತಿಳಿಸಿದ್ದಾರೆ.

ಬಿತ್ತನೆ ಮಾಡುವ ಬೀಜಗಳಿಗೆ ಶಿಫಾರಸು ಮಾಡಿದ ಪ್ರಮಾಣದಲ್ಲಿ ಕೀಟನಾಶಕ ಹಾಗೂ ಶಿಲೀಂಧ್ರನಾಶಕ ಬಳಸಿ ಬೀಜೋಪಚಾರ ಮಾಡಬೇಕು. ಒಣ ಬೇಸಾಯದಲ್ಲಿ ಪ್ರತಿ ಎಕರೆಗೆ 20 ಕೆ.ಜಿ. ಕಡಲೆ ಬೀಜವನ್ನು ಬಳಸಬೇಕು. ಜಾಕಿ–92, 18 ಅಥವಾ ಬಿಜಿಡಿ–111–1 ಸುಧಾರಿತ ತಳಿಗಳನ್ನು ಒಂದು ಅಡಿ ಸಾಲಿನ ಅಂತರದಲ್ಲಿ ಬಿತ್ತನೆ ಮಾಡಬೇಕು ಎಂದು ಸೂಚಿಸಿದ್ದಾರೆ.

ಪ್ರತಿ ಎಕರೆಗೆ ಅಗತ್ಯವಿರುವ ಕಡಲೆ ಬೀಜವನ್ನು ಶೇ.25ರಷ್ಟು ಗೋಮೂತ್ರದ ದ್ರಾವಣದಲ್ಲಿ, ಅಂದರೆ ಒಂದು ಭಾಗ ಗೋಮೂತ್ರಕ್ಕೆ ಮೂರು ಭಾಗ ನೀರು ಬೆರೆಸಿ, ಎಂಟು ಗಂಟೆಗಳ ಕಾಲ ನೆನೆಸಬೇಕು. ಬಳಿಕ ಏಳು ಗಂಟೆಗಳ ಕಾಲ ನೆರಳಿನಲ್ಲಿ ಒಣಗಿಸಿ, 250 ಗ್ರಾಂ ಟ್ರೈಕೋಡರ್ಮಾ ಶಿಲೀಂಧ್ರನಾಶಕ, 500 ಗ್ರಾಂ ರೈಜೋಬಿಯಂ ಹಾಗೂ 500 ಗ್ರಾಂ ರಂಜಕ ಕರಗಿಸುವ ಅಣುಜೀವಿ ಗೊಬ್ಬರದಿಂದ ಬೀಜೋಪಚಾರ ಮಾಡಿ ಬಿತ್ತನೆ ಮಾಡಬೇಕು.

ಕಡಲೆ ಬೆಳೆಯೊಂದಿಗೆ 4ರಿಂದ 6 ಸಾಲು ಕಡಲೆ ಹಾಗೂ ಎರಡು ಸಾಲು ಕುಸುಬೆಯನ್ನು ಅಥವಾ ಜೋಳವನ್ನು ಅಂತರ ಬೆಳೆಯಾಗಿ ಬೆಳೆಯಬಹುದು. ಮಸಾರಿ ಜಮೀನುಗಳಲ್ಲಿ ಬೆಳೆದ ಹತ್ತಿ ಬೆಳೆಯಲ್ಲಿ ಹುರುಳಿಯನ್ನು ಸರಣಿ ಬೆಳೆಯಾಗಿ ಬಿತ್ತನೆ ಮಾಡುವುದರಿಂದ ಗುಣಮಟ್ಟದ ಮೇವು ಪಡೆಯಬಹುದು. ಕೆಂಪು ಮಣ್ಣಿನ ಜಮೀನುಗಳಲ್ಲಿ ತೊಗರಿ, ಶೇಂಗಾ, ರಾಗಿ ಮತ್ತು ಜೋಳದೊಂದಿಗೆ ಹುರುಳಿಯನ್ನು ಅಂತರ ಬೆಳೆಯಾಗಿ ಬೆಳೆಯಬಹುದು ಎಂದು ಸಲಹೆ ನೀಡಿದ್ದಾರೆ.

ಅನಿಶ್ಚಿತ ಮಳೆ ಹಾಗೂ ತೇವಾಂಶದ ಕೊರತೆಯನ್ನು ಗಮನದಲ್ಲಿಟ್ಟುಕೊಂಡು, ಪ್ರತಿ ಎಕರೆ ಕಡಲೆ ಬೆಳೆಗೆ ಬಿತ್ತನೆ ಸಮಯದಲ್ಲಿ 20 ಕೆ.ಜಿ. ಡಿಎಪಿ ಅಥವಾ 25 ಕೆ.ಜಿ. 20:20:0:13 ಅಥವಾ 40 ಕೆ.ಜಿ. 10:26:26 ರಸಗೊಬ್ಬರವನ್ನು ಬಳಸಬಹುದು. ನಂತರದ ದಿನಗಳಲ್ಲಿ ಮಣ್ಣಿನ ತೇವಾಂಶಕ್ಕೆ ಅನುಗುಣವಾಗಿ ಪೋಷಕಾಂಶಗಳನ್ನು ಸಿಂಪಡಿಸಬೇಕು ಎಂದು ತಿಳಿಸಿದ್ದಾರೆ.

---

## ಎಐಐಎಸ್‌ಎಂನಲ್ಲಿ ಚರ್ಚಾ ವೇದಿಕೆ, ಜಿಮ್ಖಾನಾ ಚಟುವಟಿಕೆಗಳಿಗೆ ಚಾಲನೆ

# ವಿದ್ಯಾರ್ಥಿಗಳು ಕೃತಕ ಬುದ್ಧಿಮತ್ತೆ, ನಾವೀನ್ಯತೆಗೆ ಒತ್ತು ನೀಡಲಿ




**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಇಂದಿನ ವೇಗವಾಗಿ ಬದಲಾಗುತ್ತಿರುವ ತಂತ್ರಜ್ಞಾನ ಯುಗದಲ್ಲಿ ವಿದ್ಯಾರ್ಥಿಗಳು ಕೃತಕ ಬುದ್ಧಿಮತ್ತೆ, ಡೇಟಾ ಸೈನ್ಸ್ ಮತ್ತು ಮಷಿನ್ ಲರ್ನಿಂಗ್‌ನಂತಹ ಕ್ಷೇತ್ರಗಳ ಜ್ಞಾನ ಬೆಳೆಸಿಕೊಳ್ಳುವುದರ ಜತೆಗೆ ಸೃಜನಶೀಲತೆ, ಸ್ವತಂತ್ರ ಚಿಂತನೆ ಹಾಗೂ ಸಮಸ್ಯೆಗಳನ್ನು ಪರಿಹರಿಸುವ ಸಾಮರ್ಥ್ಯಕ್ಕೂ ಆದ್ಯತೆ ನೀಡಬೇಕು ಎಂದು ಕರ್ನಾಟಕ ವಿಶ್ವವಿದ್ಯಾಲಯದ ಕುಲಪತಿ ಡಾ. ಎ.ಎಂ. ಖಾನ್ ಹೇಳಿದರು.

ನಗರದ ಅಂಜುಮನ್ ಇನ್‌ಸ್ಟಿಟ್ಯೂಟ್ ಆಫ್ ಇನ್‌ಫರ್ಮೇಷನ್ ಸೈನ್ಸ್ ಅಂಡ್ ಮ್ಯಾನೇಜ್‌ಮೆಂಟ್ (ಎಐಐಎಸ್‌ಎಂ) ವತಿಯಿಂದ 2026–27ನೇ ಶೈಕ್ಷಣಿಕ ಸಾಲಿನ ಕಾಲೇಜು ಚರ್ಚಾ ವೇದಿಕೆ ಹಾಗೂ ಜಿಮ್ಖಾನಾ ಚಟುವಟಿಕೆಗಳ ಉದ್ಘಾಟನಾ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು. ನಗರದ ಡಾ. ಪಾಟೀಲ ಪುಟ್ಟಪ್ಪ ಸಭಾಭವನದಲ್ಲಿ ಗುರುವಾರ ಕಾರ್ಯಕ್ರಮ ನಡೆಯಿತು.

ತಂತ್ರಜ್ಞಾನವು ಮಾನವನ ಬುದ್ಧಿವಂತಿಕೆ ಮತ್ತು ಸೃಜನಶೀಲತೆಗೆ ಪರ್ಯಾಯವಲ್ಲ. ಬದಲಾಗಿ ಅವುಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲು ನೆರವಾಗುವ ಸಾಧನವಾಗಿದೆ. ತಾಂತ್ರಿಕ ಜ್ಞಾನದ ಜತೆಗೆ ಸಂವಹನ ಕೌಶಲ್ಯ, ನಾಯಕತ್ವ ಗುಣ, ತಂಡದೊಂದಿಗೆ ಕೆಲಸ ಮಾಡುವ ಸಾಮರ್ಥ್ಯ ಹಾಗೂ ನೈತಿಕ ಮೌಲ್ಯಗಳನ್ನು ಬೆಳೆಸಿಕೊಳ್ಳುವುದು ಇಂದಿನ ವಿದ್ಯಾರ್ಥಿಗಳಿಗೆ ಅತ್ಯಗತ್ಯ ಎಂದರು.

ಬಿಬಿಎ ಮತ್ತು ಬಿಸಿಎ ವಿದ್ಯಾರ್ಥಿಗಳು ಉದ್ಯೋಗಾವಕಾಶಗಳನ್ನು ಪಡೆದುಕೊಳ್ಳಲು ಪಠ್ಯಕ್ರಮದ ಜ್ಞಾನದ ಜತೆಗೆ ಉತ್ತಮ ಸಂವಹನ ಕೌಶಲ್ಯ, ಆತ್ಮವಿಶ್ವಾಸ ಮತ್ತು ಸಮಸ್ಯೆಗಳನ್ನು ವಿಶ್ಲೇಷಿಸುವ ಸಾಮರ್ಥ್ಯ ಬೆಳೆಸಿಕೊಳ್ಳಬೇಕು.

ಚರ್ಚೆಗಳು, ಪ್ರಸ್ತುತಿಗಳು, ಕ್ರೀಡೆ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವ ಮೂಲಕ ತಮ್ಮ ವ್ಯಕ್ತಿತ್ವವನ್ನು ವಿಕಸನಗೊಳಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಪರಿಸರ ಸಂರಕ್ಷಣೆಯ ಮಹತ್ವವನ್ನು ಪ್ರಸ್ತಾಪಿಸಿದ ಡಾ. ಖಾನ್, ಹವಾಮಾನ ಬದಲಾವಣೆ, ವಾಯುಮಾಲಿನ್ಯ, ನೀರಿನ ಕೊರತೆ ಮತ್ತು ತ್ಯಾಜ್ಯ ನಿರ್ವಹಣೆ ಇಂದಿನ ಪ್ರಮುಖ ಸವಾಲುಗಳಾಗಿವೆ. ಈ ಸವಾಲುಗಳನ್ನು ನಾವೀನ್ಯತೆ, ಉದ್ಯಮಶೀಲತೆ ಮತ್ತು ಸುಸ್ಥಿರ ಅಭಿವೃದ್ಧಿಗೆ ಅವಕಾಶಗಳನ್ನಾಗಿ ಪರಿವರ್ತಿಸಲು ಯುವಜನತೆ ಮುಂದಾಗಬೇಕು ಎಂದರು.

ಕಾರ್ಯಕ್ರಮದಲ್ಲಿ ವಿಶೇಷ ಆಹ್ವಾನಿತರಾಗಿ ಪಾಲ್ಗೊಂಡಿದ್ದ ನೇಚರ್ ಫಸ್ಟ್ ಇಕೋ ವಿಲೇಜ್‌ನ ಸಂಸ್ಥಾಪಕ ಪಂಚಪ್ಪ ವಿ. ಹಿರೇಮಠ ಅವರ ಉಪಸ್ಥಿತಿಯು ಪರಿಸರ ಜಾಗೃತಿ ಮತ್ತು ಸುಸ್ಥಿರ ಅಭಿವೃದ್ಧಿಯ ಮಹತ್ವವನ್ನು ಮತ್ತಷ್ಟು ಎತ್ತಿಹಿಡಿಯಿತು.

ಅಂಜುಮನ್–ಎ–ಇಸ್ಲಾಂ, ಧಾರವಾಡದ ಅಧ್ಯಕ್ಷ ಮೊಹಮ್ಮದ್ ಇಸ್ಮಾಯಿಲ್ ಎಂ. ತಮಟಗಾರ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಗೌರವ ಕಾರ್ಯದರ್ಶಿ ಡಾ. ಎಸ್.ಎ. ಸರ್ಗಿರೊ, ಖಜಾಂಚಿ ಅಲ್ಹಾಜ್ ಮೊಹಮ್ಮದ್ ರಫೀಕ್ ಸಿ. ಶಿರಹಟ್ಟಿ, ಶಿಕ್ಷಣ ಮಂಡಳಿಯ ಸದಸ್ಯರಾದ ಡಾ. ಎನ್.ಎಂ. ಮಕಂದಾರ್, ಅಲ್ಹಾಜ್ ಅಬ್ದುಲ್ ಅಜೀಜ್ ಬಡಬಡೆ, ಖಲೀಲ್ ದಾಸನಕೊಪ್ಪ ಹಾಗೂ ರಿಯಾಜ್ ಅಹ್ಮದ್ ನಾನೇಸಾಬನವರ್ ಉಪಸ್ಥಿತರಿದ್ದರು. ಪವಿತ್ರ ಕುರ್‌ಆನ್ ಪಠಣದೊಂದಿಗೆ ಕಾರ್ಯಕ್ರಮ ಆರಂಭವಾಯಿತು. ನಂತರ ವಚನಗಳು ಹಾಗೂ ನಾಡಗೀತೆ ಪ್ರಸ್ತುತಪಡಿಸಲಾಯಿತು. ಕಾಲೇಜಿನ ಪ್ರಾಚಾರ್ಯ ಪ್ರೊ. ಅಬ್ದುಲ್ ಮತೀನ್ ಎಂ. ಬಿದಿವಾಲೆ ಸ್ವಾಗತ ಭಾಷಣ ಮಾಡಿದರು. ಐಕ್ಯೂಎಸಿ ಸಂಯೋಜಕಿ ಪ್ರೊ. ಅನಿಸಾ ಫಾತಿಮಾ ತೊರ್ಗಲ್ ಅತಿಥಿಗಳನ್ನು ಪರಿಚಯಿಸಿದರು.

ಈ ಸಂದರ್ಭದಲ್ಲಿ ಅತಿಥಿಗಳನ್ನು ಸನ್ಮಾನಿಸಲಾಯಿತು. ಸಸಿಗೆ ನೀರುಣಿಸುವ ಮೂಲಕ ಪರಿಸರ ಜಾಗೃತಿಯ ಸಂದೇಶ ಸಾರಲಾಯಿತು. ಅಧ್ಯಕ್ಷರು ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು.

ಚರ್ಚಾ ವೇದಿಕೆಯು ವಿದ್ಯಾರ್ಥಿಗಳಲ್ಲಿ ವಾಕ್ಚಾತುರ್ಯ, ತಾರ್ಕಿಕ ಚಿಂತನೆ ಮತ್ತು ಅಭಿಪ್ರಾಯ ವ್ಯಕ್ತಪಡಿಸುವ ಸಾಮರ್ಥ್ಯವನ್ನು ಬೆಳೆಸಲು ಸಹಕಾರಿಯಾಗಲಿದೆ. ಜಿಮ್ಖಾನಾ ಚಟುವಟಿಕೆಗಳು ಕ್ರೀಡಾಸ್ಫೂರ್ತಿ, ಶಿಸ್ತು, ನಾಯಕತ್ವ, ತಂಡದ ಮನೋಭಾವ ಹಾಗೂ ಸಾಂಸ್ಕೃತಿಕ ಪ್ರತಿಭೆಗಳ ವಿಕಸನಕ್ಕೆ ವೇದಿಕೆಯಾಗಲಿವೆ. ಶೈಕ್ಷಣಿಕ ಜ್ಞಾನದ ಜತೆಗೆ ತಾಂತ್ರಿಕ ಕೌಶಲ್ಯ, ಆತ್ಮವಿಶ್ವಾಸ, ಸೃಜನಶೀಲತೆ ಮತ್ತು ಸಾಮಾಜಿಕ ಹೊಣೆಗಾರಿಕೆಯನ್ನು ವಿದ್ಯಾರ್ಥಿಗಳಲ್ಲಿ ಬೆಳೆಸುವ ಉದ್ದೇಶದಿಂದ ಸಂಸ್ಥೆಯು ಇಂತಹ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡುತ್ತಿದೆ.

ಪ್ರೊ. ರುಹಿದಾ ನದಾಫ್ ವಂದನಾರ್ಪಣೆ ಮಾಡಿದರು. ರಾಷ್ಟ್ರಗೀತೆಯೊಂದಿಗೆ ಸಮಾರಂಭ ಮುಕ್ತಾಯವಾಯಿತು.

### ದಸರಾ ಮಹೋತ್ಸವದ ಶ್ರೀದೇವಿ ಪುರಾಣ ಪ್ರವಚನದಲ್ಲಿ ಡಾ. ಸಂತೋಷ ಬೆಳವಡಿ

# ಪುರಾಣಗಳಿಗೂ ಆಯುರ್ವೇದಕ್ಕೂ ಅವಿನಾಭಾವ ಸಂಬಂಧ




**ವಿಜಯಸಾಕ್ಷಿ ಸುದ್ದಿ, ಗದಗ**

ಪುರಾಣಗಳು ಪ್ರಾಚೀನ ಹಿಂದೂ ಧಾರ್ಮಿಕ ಸಾಹಿತ್ಯದ ಪ್ರಮುಖ ಭಾಗವಾಗಿದ್ದು, ಸೃಷ್ಟಿಯಿಂದ ವಿನಾಶದವರೆಗಿನ ಬ್ರಹ್ಮಾಂಡದ ನಿರೂಪಣೆ, ರಾಜರು, ವೀರರು, ಋಷಿಗಳು ಹಾಗೂ ದೇವತೆಗಳ ವಂಶಾವಳಿಯ ವಿವರಗಳನ್ನು ಒಳಗೊಂಡಿವೆ. ಪುರಾಣಗಳು ಪ್ರಾಚೀನ ವೈದ್ಯಕೀಯ ವಿಜ್ಞಾನವಾದ ಆಯುರ್ವೇದದೊಂದಿಗೂ ಸಂಬಂಧ ಹೊಂದಿವೆ ಎಂದು ಗದಗದ ಡಿಜಿಎಂ ಆಯುರ್ವೇದ ಮಹಾವಿದ್ಯಾಲಯದ ಪ್ರಾಚಾರ್ಯ ಹಾಗೂ ವೈದ್ಯಕೀಯ ನಿರ್ದೇಶಕ ಡಾ. ಸಂತೋಷ ಬೆಳವಡಿ ಹೇಳಿದರು.

ನಗರದ ಅಡವೀಂದ್ರಸ್ವಾಮಿ ಮಠದಲ್ಲಿ 2026ನೇ ಸಾಲಿನ ದಸರಾ ಮಹೋತ್ಸವದ ಅಂಗವಾಗಿ ಆಯೋಜಿಸಿದ್ದ 46ನೇ ವರ್ಷದ ಶ್ರೀದೇವಿ ಪುರಾಣ ಪ್ರವಚನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪುರಾಣಗಳಲ್ಲಿ ವಿಷ್ಣು, ಶಿವ ಮತ್ತು ದೇವಿಯಂತಹ ದೇವತೆಗಳ ಆರಾಧನೆಗೆ ಮಹತ್ವ ನೀಡಲಾಗಿದೆ. ದಸರಾ ಸಂದರ್ಭದಲ್ಲಿ ಶ್ರೀದೇವಿಯನ್ನು ಆರಾಧಿಸುವ ಮೂಲಕ ಜೀವನದಲ್ಲಿ ಸಕಾರಾತ್ಮಕ ಬದಲಾವಣೆಗಳನ್ನು ತಂದುಕೊಳ್ಳಲು ಸಾಧ್ಯ. ಅಡವೀಂದ್ರಸ್ವಾಮಿ ಮಠದಲ್ಲಿ ಪ್ರತಿವರ್ಷ ಶ್ರೀದೇವಿಯ ಆರಾಧನೆ ನಡೆಸುತ್ತಿರುವುದು ಸ್ತುತ್ಯಾರ್ಹ ಎಂದು ಹೇಳಿದರು.

ಡಿಜಿಎಂ ಆಯುರ್ವೇದ ಮಹಾವಿದ್ಯಾಲಯದ ಪ್ರಾಧ್ಯಾಪಕಿ ಡಾ. ಮಮತಾ ಸಂತೋಷ ಬೆಳವಡಿ ಮಾತನಾಡಿ, ಪುರಾಣ ಸಾಹಿತ್ಯ ಹಿಂದೂ ಮತ್ತು ಜೈನ ಧರ್ಮಗಳಲ್ಲಿಯೂ ಕಂಡುಬರುತ್ತದೆ. ಪುರಾಣಗಳು ಹಾಗೂ ಮಹಾಕಾವ್ಯಗಳ ಮೂಲಕ ವೇದಗಳು ಮತ್ತು ಹಿಂದೂ ತತ್ವಶಾಸ್ತ್ರದ ವಿಚಾರಗಳು ಜನಪ್ರಿಯವಾಗಿವೆ.

ವೇದಗಳಲ್ಲಿನ ನೈಸರ್ಗಿಕ ವಿವರಣೆಗಳು ಹಾಗೂ ಕೆಲವು ಐತಿಹಾಸಿಕ ಘಟನೆಗಳನ್ನು ಕಥೆಗಳ ರೂಪದಲ್ಲಿ ಜನರಿಗೆ ತಲುಪಿಸುವುದು ಪುರಾಣಗಳ ಪ್ರಮುಖ ಉದ್ದೇಶವಾಗಿದೆ.

ಪುರಾಣಗಳ ಸಂಕಲನವನ್ನು ಮಹಾಭಾರತದ ಕರ್ತೃ ವ್ಯಾಸರು ಮಾಡಿದ್ದಾರೆ ಎಂದು ಹೇಳಲಾಗುತ್ತದೆ. ಮಹಿಳೆಯರು ಶ್ರೀದೇವಿಯ ಆರಾಧನೆಯ ಮೂಲಕ ಕುಟುಂಬದ ಒಳಿತಿಗಾಗಿ ಪ್ರಾರ್ಥಿಸುತ್ತಾರೆ ಎಂದು ತಿಳಿಸಿದರು.

ಶ್ರೀಮಠದ ಧರ್ಮದರ್ಶಿ ಮಹೇಶ್ವರ ಸ್ವಾಮೀಜಿ ಹೊಸಳ್ಳಿಮಠ ಸಾನ್ನಿಧ್ಯ ವಹಿಸಿದ್ದರು. ಪಂ. ರಾಜಗುರು ಗುರುಸ್ವಾಮಿ ಕಲಕೇರಿ ಹಾಗೂ ಚನ್ನಬಸಯ್ಯ ಶಾಸ್ತ್ರಿಗಳು ಹೇಮಗಿರಿಮಠ ಅವರು ಶ್ರೀದೇವಿ ಪುರಾಣ ಪಠಣ ನಡೆಸಿಕೊಟ್ಟರು. ವಿರುಪಾಕ್ಷಯ್ಯ ಹೊಸಳ್ಳಿಮಠ ಬಾನ್ಸುರಿ ವಾದನ ಪ್ರಸ್ತುತಪಡಿಸಿದರು.

ನಗರಸಭೆ ಮಾಜಿ ಅಧ್ಯಕ್ಷ ಪ್ರಕಾಶ ಬಾಕಳೆ, ಶಿವಾನುಭವ ಸಮಿತಿ ಅಧ್ಯಕ್ಷ ಡಾ. ರಾಜೇಂದ್ರ ಗಡಾದ, ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷ ಸಂತೋಷ ಮಹೇಶಚಂದ್ರ ಕಬಾಡರ, ಉಪಾಧ್ಯಕ್ಷರಾದ ಪ್ರಕಾಶ ಅಕ್ಕಿ ಮತ್ತು ವಿನಾಯಕ ಪಾಟೀಲ, ಕಾರ್ಯದರ್ಶಿ ಶಿವಪ್ರಭು ನೀಲಗುಂದ, ಮಹಿಳಾ ವಿಭಾಗದ ಅಧ್ಯಕ್ಷೆ ಶಿವಲೀಲಾ ಅಕ್ಕಿ, ಅನ್ನಪೂರ್ಣೇಶ್ವರಿ ಕಬಾಡರ ಹಾಗೂ ಅಶ್ವಿನಿ ನೀಲಗುಂದ ವೇದಿಕೆಯಲ್ಲಿದ್ದರು.

ಪ್ರಸಾದ ಭಕ್ತಿಸೇವೆಯನ್ನು ರಾಜಶೇಖರಯ್ಯ ವಸ್ತ್ರದ, ವೀರಣ್ಣ ಸಂಶಿ, ಮಲ್ಲಿಕಾರ್ಜುನ ಸವದತ್ತಿಮಠ, ಸುಮಿತ್ರಾ ಹುರಳಿ, ಸಿದ್ರಾಮಪ್ಪ ಹೊಸಂಗಡಿ, ಡಾ. ವಿ.ಎಸ್. ಕಂಠಿ, ಗಂಗಾಧರ ರಟ್ಟಿಹಳ್ಳಿಮಠ ಹಾಗೂ ಬಿ.ಎಲ್. ಹೊಸಳ್ಳಿಮಠ ವಹಿಸಿದ್ದರು. ಜಾತ್ರಾ ಮಹೋತ್ಸವ ಸಮಿತಿ ಸಹಕಾರ್ಯದರ್ಶಿ ಬಸವರಾಜ ಬ್ಯಾಹಟ್ಟಿ, ಕೋಶಾಧ್ಯಕ್ಷ ಪ್ರಭುಗೌಡ ಪಾಟೀಲ, ಅಮೃತಾ ವಾರಕರ ಹಾಗೂ ನಿರ್ದೇಶಕ ಮಂಡಳಿ ಸದಸ್ಯರು ಉಪಸ್ಥಿತ-ರಿದ್ದರು.

ಡಾ. ವೇದಾ ವಿಕ್ರಮ ಬಿದರೂರ ಸ್ವಾಗತಿಸಿದರು. ಶೈಲಾ ಶ್ರೀನಿವಾಸರಡ್ಡಿ ವಂದಿಸಿದರು.

> ದಸರಾ ಸಂದರ್ಭದಲ್ಲಿ ಶ್ರೀದೇವಿಯ ಆರಾಧನೆಯ ಮೂಲಕ ಜೀವನದಲ್ಲಿ ಸಕಾರಾತ್ಮಕ ಬದಲಾವಣೆಗಳನ್ನು ತಂದುಕೊಳ್ಳಬಹುದು. ಅಡವೀಂದ್ರಸ್ವಾಮಿ ಮಠದಲ್ಲಿ ಪ್ರತಿವರ್ಷ ನಡೆಯುವ ಶ್ರೀದೇವಿಯ ಆರಾಧನೆ ಸ್ತುತ್ಯಾರ್ಹವಾಗಿದೆ.
>
> – ಡಾ. ಸಂತೋಷ ಬೆಳವಡಿ, ಪ್ರಾಚಾರ್ಯರು

## ಮಾದಕವ್ಯಸನಕ್ಕೆ ಬಲಿಯಾಗದಿರಿ



**ವಿಜಯಸಾಕ್ಷಿ ಸುದ್ದಿ, ಗದಗ**

ಬೀಡಿ, ಸಿಗರೇಟ್, ಗಾಂಜಾ, ಅಫೀಮು ಸೇರಿದಂತೆ ಮಾದಕ ಪದಾರ್ಥಗಳ ವ್ಯಸನಕ್ಕೆ ಒಳಗಾಗಿ ಯುವಕರು ತಮ್ಮ ಅಮೂಲ್ಯ ಜೀವನವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ಯುವಜನತೆ ಇಂತಹ ದುಶ್ಚಟಗಳಿಂದ ದೂರವಿದ್ದು, ವ್ಯಸನಿಗಳ ಸಹವಾಸವನ್ನೂ ಮಾಡಬಾರದು ಎಂದು ಪ್ರಕಾಶ ಬರದೂರ ಕರೆ ನೀಡಿದರು.

ತಾಲೂಕಿನ ಬಳಗಾನೂರಿನಲ್ಲಿ ಚಿಕ್ಕೇನಕೊಪ್ಪದ ಶ್ರೀ ಚನ್ನವೀರ ಶರಣರ ಪದವಿ ಪೂರ್ವ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ವಿಶೇಷ ಶಿಬಿರದಲ್ಲಿ ಆಯೋಜಿಸಿದ್ದ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಇಂದಿನ ದಿನಗಳಲ್ಲಿ 20ರಿಂದ 29 ವರ್ಷದೊಳಗಿನ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಮಾದಕ ವ್ಯಸನಕ್ಕೆ ಒಳಗಾಗುತ್ತಿರುವುದು ಅತ್ಯಂತ ವಿಷಾದನೀಯ ಸಂಗತಿಯಾಗಿದೆ. ಯುವಕರು ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳುವ ಅಮೂಲ್ಯ ವಯಸ್ಸಿನಲ್ಲಿ ದುಶ್ಚಟಗಳಿಗೆ ಬಲಿಯಾಗದೆ, ಮಾದಕ ಪದಾರ್ಥಗಳಿಂದ ದೂರವಿದ್ದು ಆರೋಗ್ಯಕರ ಜೀವನ ನಡೆಸಬೇಕು ಎಂದು ಸಲಹೆ ನೀಡಿದರು.

ಬಸವರಾಜ ಈರಣ್ಣವರ ನೇತೃತ್ವದ ಜೇನುಗೂಡು ಜನಪದ ಕಲಾತಂಡದಿಂದ ಜಾಗೃತಿ ಜನಪದ ಕಾರ್ಯಕ್ರಮ ನಡೆಯಿತು. ಯುವಕರಲ್ಲಿ ಜಾಗೃತಿ ಮತ್ತು ವೈಚಾರಿಕತೆ ಮೂಡಿಸುವ ಸಂದೇಶಗಳನ್ನು ಹಾಸ್ಯಭರಿತ ಜನಪದ ಹಾಡುಗಳ ಮೂಲಕ ಕಲಾತಂಡದ ಸದಸ್ಯರು ಪ್ರಸ್ತುತಪಡಿಸಿದರು.

ಈ ಸಂದರ್ಭದಲ್ಲಿ ಗ್ರಾಮದ ಹಿರಿಯರಾದ ಚೆನ್ನಯ್ಯ ಶಾಂತಯ್ಯನಮಠ, ಡಾ. ವೀರನಗೌಡ ಚನ್ನಪ್ಪಗೌಡ್ರು, ಮುತ್ತಪ್ಪ ಕಂಬಳಿ, ಕಾಲೇಜಿನ ಪ್ರಾಚಾರ್ಯ ಎಸ್.ಬಿ. ಹಿರೇಮಠ ಹಾಗೂ ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಜಿ.ಎಸ್. ವೀರಘಂಟಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಶಿಬಿರಾರ್ಥಿ ಸಾವಿತ್ರಿ ಬಸರಕೊಡ ಕಾರ್ಯಕ್ರಮ ನಿರೂಪಿಸಿದರು. ರೇಖಾ ಕುರಿ ಸ್ವಾಗತಿಸಿದರು. ಸುನೀಲ ಶಿರಗುಪ್ಪಿ ವಂದಿಸಿದರು.

> ಯುವಕರು ಮಾದಕ ಪದಾರ್ಥಗಳಿಂದ ದೂರವಿದ್ದು, ಅಂತಹ ವ್ಯಸನಗಳಿಗೆ ಒಳಗಾದವರ ಸಹವಾಸವನ್ನೂ ಮಾಡಬಾರದು. ತಮ್ಮ ಅಮೂಲ್ಯ ಜೀವನವನ್ನು ದುಶ್ಚಟಗಳಿಗೆ ಬಲಿಯಾಗಿಸಿಕೊಳ್ಳದೆ ಭವಿಷ್ಯದತ್ತ ಗಮನ ಹರಿಸಬೇಕು.
>
> – ಪ್ರಕಾಶ ಬರದೂರ

### ಜೀವನ ಮೌಲ್ಯಗಳ ಆಗರ ಜನಪದ ಸಾಹಿತ್ಯ: ಆರ್.ಎಫ್. ಲೊಟಗೇರಿ

# ಜನಪದವೇ ಕನ್ನಡ ಸಾಹಿತ್ಯದ ಜೀವಸೆಲೆ



**ವಿಜಯಸಾಕ್ಷಿ ಸುದ್ದಿ, ಗದಗ**

ಜೀವನಾನುಭವಗಳನ್ನು ಎರಕ ಹೊಯ್ದು ರೂಪುಗೊಂಡಿರುವ ಜನಪದ ಸಾಹಿತ್ಯ ಜೀವನ ಮೌಲ್ಯಗಳ ಆಗರವಾಗಿದೆ. ಸಂಪ್ರದಾಯ, ನಂಬಿಕೆ, ಆಚರಣೆ ಹಾಗೂ ಸಂಸ್ಕೃತಿಗಳನ್ನು ಒಳಗೊಂಡಿರುವ ಜನಪದ ಸಾಹಿತ್ಯವೇ ಶಿಷ್ಟ ಸಾಹಿತ್ಯಕ್ಕೆ ಮೂಲಾಧಾರವಾಗಿದೆ. ಸ್ಥಳೀಯ ಭಾಷೆ ಮತ್ತು ಉಪಭಾಷೆಗಳ ಮೂಲಕ ವೈವಿಧ್ಯಮಯವಾಗಿ ಅಭಿವ್ಯಕ್ತಿಗೊಂಡಿರುವ ಜನಪದ ಸಾಹಿತ್ಯ ಅದ್ಭುತ ಸೃಜನಶೀಲತೆಯನ್ನು ಹೊಂದಿದೆ ಎಂದು ನಿವೃತ್ತ ಉಪನ್ಯಾಸಕ ಆರ್.ಎಫ್. ಲೊಟಗೇರಿ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಆಯೋಜಿಸಿದ್ದ ಸಿರಸಂಗಿ ಲಿಂಗರಾಜರು ಹಾಗೂ ಪಾರ್ವತಿ ಹನುಮಸಾಗರ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕನ್ನಡ ಸಾಹಿತ್ಯ ಇಷ್ಟೊಂದು ವಿಪುಲವಾಗಿ ಬೆಳೆಯುವಲ್ಲಿ ಜನಪದ ಸಾಹಿತ್ಯದ ಕೊಡುಗೆ ಅಪಾರವಾಗಿದೆ. ಜನಪದ ಸಾಹಿತ್ಯ ಕನ್ನಡ ನಾಡಿನ ಸಾಂಸ್ಕೃತಿಕ ಆತ್ಮವಾಗಿದೆ. ಅದನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ನಿಟ್ಟಿನಲ್ಲಿ ನಿರಂತರ ಅಧ್ಯಯನ, ಸಂಶೋಧನೆ ಹಾಗೂ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸುವುದು ಅಗತ್ಯ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಕವಿರಾಜಮಾರ್ಗಕಾರರು ಜನಪದ ಕಾವ್ಯರಚನೆಯ ಶಕ್ತಿಯನ್ನು ಗುರುತಿಸಿ, "ಕು-ರಿತೋದದೆಯುಂ ಕಾವ್ಯಪ್ರಯೋಗ ಪರಿಣಿತಮತಿಗಳ್" ಎಂದು ಉಲ್ಲೇಖಿಸಿದ್ದಾರೆ. ಅನುಭವಜನ್ಯವಾದ ಜನಪದ ಸಾಹಿತ್ಯ ಸತ್ವಯುತವಾಗಿದ್ದು, ಸಾಹಿತ್ಯದ ಇತರ ಪ್ರಕಾರಗಳನ್ನು ಪೋಷಿಸುವ ಸಾಮರ್ಥ್ಯ ಹೊಂದಿದೆ. ಇಂದಿನ ಯುವಕರು ಜನಪದ ಕಲೆಗಳನ್ನು ಉಳಿಸಿ ಬೆಳೆಸುವತ್ತ ಆಸಕ್ತಿ ವಹಿಸಬೇಕು. ಹಾಡು, ನೃತ್ಯ ಮತ್ತು ಅಭಿನಯಗಳು ಪಠ್ಯದ ಭಾಗವಾಗಬೇಕು ಎಂದು ಹೇಳಿದರು. ದತ್ತಪ್ರಸನ್ನ ಪಾಟೀಲ ನಿರೂಪಿಸಿದರು. ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ರಕ್ಷಿತಾ ಗಿಡ್ನಂದಿ ವಂದಿಸಿದರು.

> ಜನಪದ ಸಾಹಿತ್ಯ ಕನ್ನಡ ನಾಡಿನ ಸಾಂಸ್ಕೃತಿಕ ಆತ್ಮವಾಗಿದೆ. ಅದನ್ನು ಉಳಿಸಿ ಬೆಳೆಸುವಲ್ಲಿ ಯುವಜನತೆ ಆಸಕ್ತಿ ವಹಿಸಬೇಕು. ಹಾಡು, ನೃತ್ಯ ಮತ್ತು ಅಭಿನಯಗಳು ಪಠ್ಯದ ಭಾಗವಾಗಬೇಕು.
>
> – ವಿವೇಕಾನಂದಗೌಡ ಪಾಟೀಲ, ಅಧ್ಯಕ್ಷರು, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು

ಕಾರ್ಯಕ್ರಮದಲ್ಲಿ ಡಿ.ಎಸ್. ಬಾಪುರಿ, ಸತೀಶ ಚನ್ನಪ್ಪಗೌಡ್ರ, ರಾಹುಲ ಗಿಡ್ನಂದಿ, ಅನ್ನದಾನಿ ಹಿರೇಮಠ, ಚಂದ್ರಶೇಖರ ವಸ್ತ್ರದ, ಶಿವಪ್ಪ ಕುರಿ, ಮಂಜುಳಾ ವೆಂಕಟೇಶಯ್ಯ, ಅನಸೂಯಾ ಮಿಟ್ಟಿ, ಶಕುಂತಲಾ ಗಿಡ್ನಂದಿ, ವಿ.ಎಸ್. ದಲಾಲಿ, ಶಂಕರಪ್ಪ ಗಾಂಜಿ, ಎಸ್.ಎಸ್. ಕಳಸಾಪೂರಶೆಟ್ರ, ಸಂಜೀವಸ್ವಾಮಿ, ಸಿ.ಎಂ. ಮಾರನಬಸರಿ, ಬಿ.ಬಿ. ಹೊಳಗುಂದಿ, ಬಿ.ಎಲ್. ಚವ್ಹಾಣ, ಸುರೇಶ ಕುಂಬಾರ, ಅಜಿತ ಘೋರ್ಪಡೆ, ಶಕುಂತಲಾ ಸಿಂಧೂರ, ಬಾಹುಬಲಿ ಜೈನರ್, ಶಿವಾನಂದ ಹೊಂಬಳ, ಜೆ.ಎ. ಪಾಟೀಲ, ಮಲ್ಲಿಕಾರ್ಜುನ ನಿಂಗೋಜಿ, ಶಿವಾಜಿ ಕಾಂಬಳೇಕರ, ಅಶೋಕ ಅಂಗಡಿ, ಅರುಣ ರಾಜಪುರೋಹಿತ, ಟಿ.ಎಂ. ದಂಡಗಿ, ಅಶೋಕ ಗಿರಡ್ಡಿ, ಪ್ರವೀಣಕುಮಾರ ಲೊಟಗೇರಿ, ಎಂ.ಎಫ್. ಡೋಣಿ, ಕೃಷ್ಣಾಜಿ ನಾಡಗೇರ, ಜಗನ್ನಾಥ ಟಿಕಾಂದಾರ, ರಮೇಶ ಹುಲಕುಂದ, ಮಹೇಶ ಶಟವಾಜಿ, ಶಶಿಕಾಂತ ಕೊರ್ಲಹಳ್ಳಿ, ಸತೀಶ ಕುಲಕರ್ಣಿ, ಕಿರಣ ಗುಗ್ಗರಿ, ರಾಜಶೇಖರ ಕರಡಿ, ಎಂ.ಡಿ. ಸಂಗಸಿ, ಪ್ರ.ತೋ. ನಾರಾಯಣಪೂರ ಮೊದಲಾದವರು ಉಪಸ್ಥಿತರಿದ್ದರು.

## ಡಾ. ತೋಂಟದ ಸಿದ್ದಲಿಂಗ ಶ್ರೀಗಳ 8ನೇ ಸ್ಮರಣೆ: ಇಂದು ಉಪನ್ಯಾಸ

**ವಿಜಯಸಾಕ್ಷಿ ಸುದ್ದಿ, ಗದಗ**



ಬಸವದಳ ಗದಗ-ಬೆಟಗೇರಿ ಘಟಕದ ವತಿಯಿಂದ ಅ. 18ರ ಭಾನುವಾರ ಬೆಳಿಗ್ಗೆ 10.30ಕ್ಕೆ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿರುವ ಶರಣ ಜಿ.ಕೆ. ಹೆರಕಲ್ಲ ಸಭಾ ವೇದಿಕೆಯಲ್ಲಿ 1720ನೇ ಶರಣ ಸಂಗಮ ಆಯೋಜಿಸಲಾಗಿದೆ. ಶರಣ ಹರಳಯ್ಯ-ಮಧುವಯ್ಯ ಹುತಾತ್ಮರ ಸ್ಮರಣೆ ಹಾಗೂ ಲಿಂ. ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ 8ನೇ ಸ್ಮರಣೆಯ ಅಂಗವಾಗಿ ಉಪನ್ಯಾಸ ಕಾರ್ಯಕ್ರಮ ನಡೆಯಲಿದೆ.

ಬಸವದಳ ಗದಗ-ಬೆಟಗೇರಿ ಅಧ್ಯಕ್ಷ ಶರಣ ಪ್ರಕಾಶ ಅಸುಂಡಿ ಸಭೆಯ ಅಧ್ಯಕ್ಷತೆ ವಹಿಸುವರು. ಗದಗದ ಶರಣ ಸಾಹಿತಿ ಶರಣೆ ಗಿರಿಜಕ್ಕ ಧರ್ಮರಡ್ಡಿ ಹಾಗೂ ಜಗದ್ಗುರು ತೋಂಟದಾರ್ಯ ಮಠದ ಡಾ. ಎಂ.ಎಂ. ಕಲಬುರ್ಗಿ ಅಧ್ಯಯನ ಸಂಸ್ಥೆಯ ಕಾರ್ಯದರ್ಶಿ ಶರಣ ಶಿವನಗೌಡ ಗೌಡರ ಉಪನ್ಯಾಸ ನೀಡುವರು. ಗದಗದ ಯೋಗ ಮತ್ತು ಧ್ಯಾನ ತರಬೇತಿದಾರ ಶರಣ ವಸಂತ ಹಲಗಿ ಹಾಗೂ ಶರಣತತ್ವದ ಅನುಯಾಯಿ ಶರಣೆ ಪದ್ಮಾವತಿ ಕೆ. ಹಂಜಗಿ ಅತಿಥಿಗಳಾಗಿ ಭಾಗವಹಿಸುವರು.

ಬಸವ ಯೋಗ ಮಹಾವಿದ್ಯಾಲಯದ ಪ್ರಾಚಾರ್ಯ ಶರಣ ಕೆ.ಎಸ್. ಪಲ್ಲೇದ ಅವರು 'ರಾಜಯೋಗಿ ಟಿ. ಕೃಷ್ಣಮಾಚಾರಿ ರಾಜ್ಯ ಪ್ರಶಸ್ತಿ-2026' ಪಡೆದ ಹಿನ್ನೆಲೆಯಲ್ಲಿ ಇದೇ ಸಂದರ್ಭದಲ್ಲಿ ಸನ್ಮಾನಿಸಲಾಗುವುದು. ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ಬಸವದಳದ ಖಜಾಂಚಿ ಎಂ.ಆರ್. ಜಿನಗಾ ಮನವಿ ಮಾಡಿದ್ದಾರೆ.

## ಸಲಹಾ ಸಮಿತಿಗೆ ರವಿರಾಜ ವೆರ್ಣೇಕರ ನೇಮಕ

**ವಿಜಯಸಾಕ್ಷಿ ಸುದ್ದಿ, ಅಣ್ಣಿಗೇರಿ**

ಧಾರವಾಡದ ಪ್ರತಿಷ್ಠಿತ ಕರ್ನಾಟಕ ವಿದ್ಯಾವರ್ಧಕ ಸಂಘದ ಶಿಕ್ಷಣ ಮಂಟಪದ ಸಲಹಾ ಸಮಿತಿ ಸದಸ್ಯರನ್ನಾಗಿ ಅಣ್ಣಿಗೇರಿಯ ತೆರಿಗೆ ಸಲಹೆಗಾರ ರವಿರಾಜ ವೆರ್ಣೇಕರ ಅವರನ್ನು ನೇಮಕ ಮಾಡಲಾಗಿದೆ.

ಕನ್ನಡ ಸಾಹಿತ್ಯ ಪರಿಷತ್ತಿನ ಅಣ್ಣಿಗೇರಿ ತಾಲೂಕು ಘಟಕದ ಮಾಜಿ ಅಧ್ಯಕ್ಷರಾಗಿರುವ ವೆರ್ಣೇಕರ ಅವರು, ಪ್ರಸ್ತುತ ಕನ್ನಡ ಜಾನಪದ ಪರಿಷತ್ತಿನ ತಾಲೂಕು ಘಟಕದ ಅಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಪಟ್ಟಣದಲ್ಲಿ ಹಲವು ಸಂಘ-ಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಸಾಮಾಜಿಕ ಹಾಗೂ ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ವೆರ್ಣೇಕರ ಅವರ ಕ್ರಿಯಾಶೀಲತೆ ಮತ್ತು ಅನುಭವವನ್ನು ಪರಿಗಣಿಸಿ, ಶಿಕ್ಷಣ ಮಂಟಪದ ಸಲಹಾ ಸಮಿತಿ ಸಂಚಾಲಕ ವೀರಣ್ಣ ವಡ್ಡಿನ ಅವರ ಶಿಫಾರಸ್ಸಿನ ಮೇರೆಗೆ ಕರ್ನಾಟಕ ವಿದ್ಯಾವರ್ಧಕ ಸಂಘದ ಪ್ರಧಾನ ಕಾರ್ಯದರ್ಶಿ ಶಂಕರ ಹಲಗತ್ತಿ ಅವರು ಈ ನೇಮಕ ಮಾಡಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಮಾನಸಿಕ ಆರೋಗ್ಯವೇ ಯಶಸ್ಸಿನ ಬುನಾದಿ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ವಿದ್ಯಾರ್ಥಿಗಳು ಆತ್ಮವಿಶ್ವಾಸ, ಮಾನಸಿಕ ಸ್ಥೈರ್ಯ ಹಾಗೂ ಸಕಾರಾತ್ಮಕ ಚಿಂತನೆಯನ್ನು ಬೆಳೆಸಿಕೊಳ್ಳಬೇಕು. ಮಾನಸಿಕ ಆರೋಗ್ಯದ ಬಗ್ಗೆ ಕಾಳಜಿ ವಹಿಸುವುದರ ಜತೆಗೆ ಜೀವನದ ಸವಾಲುಗಳನ್ನು ಎದುರಿಸುವ ಮನೋಬಲ ಬೆಳೆಸಿಕೊಳ್ಳುವುದು ಅಗತ್ಯ ಎಂದು ಕರ್ನಾಟಕ ಕಲಾ ಪದವಿ ಮಹಾವಿದ್ಯಾಲಯದ ಮನೋವಿಜ್ಞಾನ ವಿಭಾಗದ ಮುಖ್ಯಸ್ಥ ಡಾ. ಎಸ್.ಜಿ. ಜಾಧವ್ ಹೇಳಿದರು. ಸ್ಮೈಲ್ ಫೌಂಡೇಶನ್ ಧಾರವಾಡ ಹಾಗೂ ಅಂಜುಮನ್ ಪದವಿ ಮಹಾವಿದ್ಯಾಲಯದ ಸಮಾಜಶಾಸ್ತ್ರ ವಿಭಾಗದ ಸಹಯೋಗದಲ್ಲಿ ಅ. 15ರಂದು ಆಯೋಜಿಸಿದ್ದ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆಯ ವಿಶೇಷ ಉಪನ್ಯಾಸದಲ್ಲಿ "ಮಾನಸಿಕ ಆರೋಗ್ಯ ಮತ್ತು ಸಮಾಜ: ಯುವಜನರ ಮುಂದಿರುವ ಸವಾಲುಗಳು" ವಿಷಯದ ಕುರಿತು ಅವರು ಮಾತನಾಡಿದರು. ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಎನ್.ಬಿ. ನಲತವಾಡ ಅಧ್ಯಕ್ಷತೆ ವಹಿಸಿದ್ದರು. ಇಂಗ್ಲಿಷ್ ವಿಭಾಗದ ಮುಖ್ಯಸ್ಥೆ ಡಾ. ಆಸ್ಮನಾಜ್ ಬಳ್ಳಾರಿ, ಡಾ. ಸೈಯ್ಯದ ತಾಜುನೀಸಾ, ಪ್ರೊ. ಮುಬಾರಕ್ ಎ. ಮುಲ್ಲಾ ಹಾಗೂ ಪ್ರೊ. ಮುಸ್ಕಾನ್ ಸವನೂರು ವೇದಿಕೆಯಲ್ಲಿದ್ದರು.

## ನಾಮಫಲಕಗಳಲ್ಲಿ ಕನ್ನಡಕ್ಕೆ ಆದ್ಯತೆ ನೀಡಲು ಆಗ್ರಹ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದ ಅಂಗಡಿ-ಮುಂಗಟ್ಟುಗಳು, ಹೋಟೆಲ್‌ಗಳು, ಖಾಸಗಿ ಶಾಲೆಗಳು, ಆಸ್ಪತ್ರೆಗಳು ಹಾಗೂ ಇತರ ವಾಣಿಜ್ಯ ಸಂಸ್ಥೆಗಳ ನಾಮಫಲಕಗಳಲ್ಲಿ ಸರ್ಕಾರದ ನಿಯಮದಂತೆ ಶೇ.60ರಷ್ಟು ಕನ್ನಡ ಭಾಷೆ ಅಳವಡಿಸುವುದನ್ನು ಕಡ್ಡಾಯವಾಗಿ ಜಾರಿಗೊಳಿಸಬೇಕು ಎಂದು ಆಗ್ರಹಿಸಿ ಕನ್ನಡಪರ ಹೋರಾಟಗಾರರು ಪುರಸಭೆಯ ಮುಖ್ಯಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಕನ್ನಡ ನಾಡಿನಲ್ಲಿ ಕನ್ನಡ ಭಾಷೆಗೆ ಮೊದಲ ಆದ್ಯತೆ ನೀಡುವುದು ಅಗತ್ಯ. ನಾಮಫಲಕಗಳಲ್ಲಿ ಕನ್ನಡ ಸ್ಪಷ್ಟವಾಗಿ ಹಾಗೂ ಪ್ರಮುಖವಾಗಿ ಕಾಣುವಂತೆ ಕ್ರಮ ಕೈಗೊಳ್ಳಬೇಕು. ಸರ್ಕಾರದ ಆದೇಶಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಪುರಸಭೆ ಅಧಿಕಾರಿಗಳು ಪಟ್ಟಣದಾದ್ಯಂತ ಪರಿಶೀಲನೆ ನಡೆಸಿ, ನಿಯಮ ಪಾಲಿಸದ ಸಂಸ್ಥೆಗಳಿಗೆ ಸೂಚನೆ ನೀಡಿ, ಅನ್ವಯಿಸುವ ಕಾನೂನಿನ ಪ್ರಕಾರ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಒತ್ತಾಯಿಸಿದರು.

ಕನ್ನಡ ಭಾಷೆ ನಾಡಿನ ಅಸ್ಮಿತೆ, ಸಂಸ್ಕೃತಿ ಮತ್ತು ಸ್ವಾಭಿಮಾನದ ಪ್ರತೀಕವಾಗಿದ್ದು, ಅದರ ಬಳಕೆಯನ್ನು ಉತ್ತೇಜಿಸಲು ವ್ಯಾಪಾರಸ್ಥರು ಹಾಗೂ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು ಎಂದು ಮನವಿದಾರರು ತಿಳಿಸಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯ ಕೊಟ್ರೇಶ್ ತಳವಾರ, ಸಮಾಜಸೇವಕಿ ಚಿತ್ರಾ ಕಲಾವಿದರು, ಕನ್ನಡ ಜಾಗೃತಿ ಸಮಿತಿ ಸದಸ್ಯರು, ಉಮೇಶ್ ಪಾಳೆಗಾರ್, ಸೋಮಶೇಖರ್ ಒಬಳಾಪುರ, ಕಾಂಗ್ರೆಸ್ ಮುಖಂಡ ಬಿ. ದೇವೇಂದ್ರಪ್ಪ ಸೇರಿದಂತೆ ಮತ್ತಿತರರು ಉಪಸ್ಥಿತ-ರಿದ್ದರು.

### ಭಾವೈಕ್ಯತೆ, ಆಧ್ಯಾತ್ಮ ಜ್ಞಾನ ಭಾರತದ ಉಸಿರು: ಶ್ರೀ ರಂಭಾಪುರಿ ಜಗದ್ಗುರುಗಳು

# ಸತ್ಯ, ಧರ್ಮಾಚರಣೆಯಿಂದ ಶಾಂತಿಯುತ ಬದುಕು ಸಾಧ್ಯ



**ವಿಜಯಸಾಕ್ಷಿ ಸುದ್ದಿ, ಜಮಖಂಡಿ**

ಸಮಸ್ತ ಜನರ ಭೋಗ ಮತ್ತು ಮೋಕ್ಷಗಳಿಗೆ ಧರ್ಮವೇ ಮೂಲ. ಸುಖದ ಮೂಲ ಧರ್ಮಾಚರಣೆಯಲ್ಲಿದೆ. ಸತ್ಯ, ಶಾಂತಿಯ ಬದುಕಿಗೆ ಆದರ್ಶ ಮೌಲ್ಯಗಳ ಪರಿಪಾಲನೆ ಮುಖ್ಯ. ಭಾವೈಕ್ಯತೆ ಮತ್ತು ಆಧ್ಯಾತ್ಮ ಜ್ಞಾನ ಭಾರತದ ಉಸಿರಾಗಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.

ನಗರದಲ್ಲಿ ಶುಕ್ರವಾರ ನಡೆದ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದ ಆರನೇ ದಿನದ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಮಾನವ ಪರಿಪೂರ್ಣತೆಯೆಡೆಗೆ ಸಾಗುವುದೇ ನಿಜವಾದ ಧರ್ಮ. ಸತ್ಯ ಮತ್ತು ಪ್ರಾಮಾಣಿಕತೆ ಧರ್ಮದ ಆಧಾರಸ್ತಂಭಗಳು. ಮಾನವೀಯ ಸಂಬಂಧಗಳನ್ನು ಬೆಸೆಯುವುದು, ಅಸುರಿ ಗುಣಗಳನ್ನು ತೊಡೆದು ದೈವೀ ಗುಣಗಳನ್ನು ಬೆಳೆಸುವುದು ಧರ್ಮದ ಗುರಿಯಾಗಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಅಹಿಂಸೆ, ಸತ್ಯ, ಅಸ್ತೇಯ, ಬ್ರಹ್ಮಚರ್ಯ, ದಯೆ, ಕ್ಷಮೆ, ದಾನ, ಪೂಜೆ, ಜಪ ಮತ್ತು ಧ್ಯಾನ ಎಂಬ ದಶವಿಧ ಧರ್ಮಸೂತ್ರಗಳನ್ನು ಬೋಧಿಸಿದ್ದಾರೆ. ಹೆತ್ತ ತಾಯಿ ಮತ್ತು ಹೊತ್ತ ನೆಲ ಎಷ್ಟು ಮುಖ್ಯವೋ ಧರ್ಮವೂ ಅಷ್ಟೇ ಮುಖ್ಯ ಎಂದರು.

ಶ್ರೀ ಮದ್ವೀರಶೈವ ಸದ್ಬೋಧನಾ ಸಂಸ್ಥೆ ಪ್ರಕಟಿಸಿದ 2027ನೇ ಸಾಲಿನ ದಿನದರ್ಶಿಕೆಯನ್ನು ಶಿವಮೊಗ್ಗ ಲೋಕಸಭಾ ಸದಸ್ಯ ಬಿ.ವೈ. ರಾಘವೇಂದ್ರ ಬಿಡುಗಡೆ ಮಾಡಿದರು. ಆರೋಗ್ಯಪೂರ್ಣ ಸಮಾಜ ನಿರ್ಮಾಣಕ್ಕೆ ಧರ್ಮ, ಸಂಸ್ಕೃತಿ, ಆಧ್ಯಾತ್ಮ ಮತ್ತು ಆದರ್ಶ ಮೌಲ್ಯಗಳ ಅರಿವು ಅಗತ್ಯ. ವೀರಶೈವ ಧರ್ಮ ವಿಶ್ವಬಂಧುತ್ವದ ಸಂದೇಶ ಸಾರುತ್ತದೆ ಎಂದು ಹೇಳಿದರು.

ಹಂಪಸಾಗರ ನವಲಿ ಹಿರೇಮಠದ ಅಭಿನವ ಶಿವಲಿಂಗ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಮಾನವೀಯತೆ, ಪ್ರೀತಿ, ಕರುಣೆ, ಅಹಿಂಸೆ ಮತ್ತು ಸೇವಾ ಮನೋಭಾವ ಬೆಳೆಸುವುದೇ ಧರ್ಮದ ನಿಜವಾದ ಉದ್ದೇಶ ಎಂದರು.

ಗುಳೇದಗುಡ್ಡ ಅಮರೇಶ್ವರ ಮಠದ ಡಾ. ನೀಲಕಂಠ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಕಾಯಕ, ಪ್ರಾಮಾಣಿಕತೆ ಮತ್ತು ನ್ಯಾಯನಿಷ್ಠೆ ಬದುಕಿನ ಶ್ರೇಯಸ್ಸಿಗೆ ದಾರಿಯಾಗಿವೆ. ಸಂಕಷ್ಟದಲ್ಲಿರುವವ-ರಿಗೆ ನೆರವಾಗುವುದು ಮಾನವೀಯ ಧರ್ಮವಾಗಿದೆ ಎಂದರು.

ಶಾಸಕ ನಾಡೋಜ ಜಗದೀಶ ಶಿವಯ್ಯ ಗುಡಗುಂಟಿ, ಮಾಜಿ ಶಾಸಕ ಶ್ರೀಕಾಂತ ಕುಲಕರ್ಣಿ ಹಾಗೂ ಜಮಖಂಡಿ ಮುತ್ತಿಕಂತಿ ಹಿರೇಮಠದ ಶಿವಲಿಂಗ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಗಳು ಉಪಸ್ಥಿತರಿದ್ದರು. ವಿವಿಧ ಮಠಗಳ ಸ್ವಾಮೀಜಿಗಳು ಹಾಗೂ ಗಣ್ಯರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು. ವೇದಘೋಷ, ಸಂಗೀತ ಮತ್ತು ನಜರ್ ಸಮರ್ಪಣೆ ಕಾರ್ಯಕ್ರಮಗಳು ನಡೆದವು.

## ಎಸ್‌ಎಲ್‌ಆರ್ ಮೆಟಾಲಿಕ್ಸ್ ವಿಸ್ತರಣೆಗೆ ರೈತರ ತೀವ್ರ ವಿರೋಧ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನ ನಾರಾಯಣದೇವರಕೆರೆ ಹಾಗೂ ಲೋಕಪ್ಪನಹೊಳ ಗ್ರಾಮದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಸ್‌ಎಲ್‌ಆರ್ ಮೆಟಾಲಿಕ್ಸ್ ಲಿಮಿಟೆಡ್ ಕಾರ್ಖಾನೆಯ ಕೋಕ್ ಓವನ್ ಸ್ಥಾವರದ ಸಾಮರ್ಥ್ಯವನ್ನು ವಾರ್ಷಿಕ 1,20,000 ಟನ್‌ಗಳಿಂದ 3,50,000 ಟನ್‌ಗಳಿಗೆ ಹೆಚ್ಚಿಸಲು ಕೋರಿರುವ ಪ್ರಸ್ತಾವನೆಗೆ ರೈತರು ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ. ಕಾರ್ಖಾನೆ ವಿಸ್ತರಣೆಗೆ ಅನುಮತಿ ನೀಡಬಾರದೆಂದು ಆಗ್ರಹಿಸಿ ವಿಜಯನಗರ ಜಿಲ್ಲಾಧಿಕಾರಿಗಳಿಗೆ ವಿರೋಧ ಪತ್ರ ಸಲ್ಲಿಸಿದ್ದಾರೆ.

ಈಗಾಗಲೇ ಕಾರ್ಖಾನೆಯಿಂದ ಹೊರಬರುವ ಧೂಳಿನಿಂದ ಸುತ್ತಮುತ್ತಲಿನ ಕೃಷಿ ಭೂಮಿಗೆ ಹಾನಿಯಾಗುತ್ತಿದ್ದು, ಬೆಳೆ ಇಳುವರಿ ಕುಸಿತದಿಂದ ರೈತರು ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ ಎಂಬುದು ರೈತರ ಆರೋಪವಾಗಿದೆ. ಕೃಷಿಗಾಗಿ ಸಾಲ ಮಾಡಿರುವ ಕುಟುಂಬಗಳು ಮತ್ತಷ್ಟು ಸಂಕಷ್ಟಕ್ಕೆ ಸಿಲುಕುವ ಆತಂಕವನ್ನೂ ವ್ಯಕ್ತಪಡಿಸಿದ್ದಾರೆ.

ಕಾರ್ಖಾನೆ ವಿಸ್ತರಣೆಯಿಂದ ಪರಿಸರ ಮಾಲಿನ್ಯ ಹೆಚ್ಚಾಗಿ ಕೃಷಿ ಚಟುವಟಿಕೆಗಳು, ಜಲಮೂಲಗಳು ಹಾಗೂ ಗ್ರಾಮೀಣ ಜನಜೀವನದ ಮೇಲೆ ದುಷ್ಪರಿಣಾಮ ಉಂಟಾಗಬಹುದು. ಧೂಳು ಮತ್ತು ಮಾಲಿನ್ಯದಿಂದ ಮಕ್ಕಳು, ವಿದ್ಯಾರ್ಥಿಗಳು, ಕೂಲಿ ಕಾರ್ಮಿಕರು ಹಾಗೂ ಗ್ರಾಮಸ್ಥರ ಆರೋಗ್ಯದ ಮೇಲೂ ಪರಿಣಾಮ ಬೀರುವ ಆತಂಕವಿದೆ ಎಂದು ತಿಳಿಸಿದ್ದಾರೆ. ಕುಡಿಯುವ ನೀರು ಮತ್ತು ಜಾನುವಾರುಗಳಿಗೆ ಮೇವಿನ ಲಭ್ಯತೆಯ ಬಗ್ಗೆಯೂ ಕಳವಳ ವ್ಯಕ್ತಪಡಿಸಿದ್ದಾರೆ.

ರೈತರ ಬದುಕು, ಪರಿಸರ ಮತ್ತು ಜನಾರೋಗ್ಯದ ಹಿತದೃಷ್ಟಿಯಿಂದ ಕಾರ್ಖಾನೆ ವಿಸ್ತರಣೆಗೆ ಅನುಮತಿ ನೀಡಬಾರದು. ಮಾಲಿನ್ಯದ ಸಮಸ್ಯೆಗಳ ಕುರಿತು ಸಂಬಂಧಪಟ್ಟ ಅಧಿಕಾರಿಗಳು ಗಂಭೀರವಾಗಿ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ರೈತರು ಜಿಲ್ಲಾಡಳಿತವನ್ನು ಒತ್ತಾಯಿಸಿದ್ದಾರೆ.

## ಪದವೀಧರರ ಸಮಸ್ಯೆಗಳಿಗೆ ಸದನದಲ್ಲಿ ಧ್ವನಿಯಾದ ನಾಯಕನಿಗೆ ಬೆಂಬಲ ನೀಡಿ

# ಸಂಕನೂರ ಮತ್ತೆ ಗೆಲ್ಲೋದು ಖಚಿತ

> ಸಂಕನೂರ ಅವರು ಪ್ರಬುದ್ಧ, ಪ್ರಾಮಾಣಿಕ ಹಾಗೂ ಕಳಂಕರಹಿತ ರಾಜಕಾರಣಿಯಾಗಿದ್ದು, ಎರಡು ಅವಧಿಗೆ ಪದವೀಧರರ ಸಮಸ್ಯೆಗಳಿಗೆ ಸ್ಪಂದಿಸಿ ಸೇವೆ ಸಲ್ಲಿಸಿದ್ದಾರೆ. ಈ ಬಾರಿಯೂ ಅವರು ಹೆಚ್ಚಿನ ಮತಗಳಿಂದ ಗೆಲುವು ಸಾಧಿಸುವುದರಲ್ಲಿ ಸಂಶಯವಿಲ್ಲ.
> – ಬಸವರಾಜ ಬೊಮ್ಮಾಯಿ, ಸಂಸದರು ಹಾಗೂ ಮಾಜಿ ಮುಖ್ಯಮಂತ್ರಿ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಶ್ಚಿಮ ಪದವೀಧರ ಕ್ಷೇತ್ರದ ಎನ್‌ಡಿಎ ಅಭ್ಯರ್ಥಿ ಪ್ರೊ. ಎಸ್.ವಿ. ಸಂಕನೂರ ಅವರು ಪ್ರಬುದ್ಧ, ಪ್ರಾಮಾಣಿಕ ಹಾಗೂ ಕಳಂಕರಹಿತ ರಾಜಕಾರಣಿಯಾಗಿದ್ದಾರೆ. ಎರಡು ಅವಧಿಗೆ ಆಯ್ಕೆಯಾಗಿ ಪದವೀಧರರ ಸಮಸ್ಯೆಗಳಿಗೆ ಸ್ಪಂದಿಸಿರುವ ಅವರು, ಈ ಬಾರಿಯೂ ಹೆಚ್ಚಿನ ಮತಗಳ ಅಂತರದಿಂದ ಗೆಲುವು ಸಾಧಿಸುವುದರಲ್ಲಿ ಸಂಶಯವಿಲ್ಲ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ ವಿಶ್ವಾಸ ವ್ಯಕ್ತಪಡಿಸಿದರು.

ಪಟ್ಟಣದ ರಂಭಾಪುರಿ ಕಲ್ಯಾಣ ಮಂಟಪದಲ್ಲಿ ಶುಕ್ರವಾರ ಸಂಜೆ ನಡೆದ ಚುನಾವಣಾ ಪ್ರಚಾರ ಸಭೆಯಲ್ಲಿ ಸಂಕನೂರ ಪರ ಮತಯಾಚಿಸಿ ಅವರು ಮಾತನಾಡಿದರು.




ನಾಲ್ಕು ದಶಕಗಳ ಕಾಲ ಕಾಲೇಜು ಉಪನ್ಯಾಸಕರಾಗಿ ಸೇವೆ ಸಲ್ಲಿಸಿರುವ ಸಂಕನೂರ, ವಿಧಾನಪರಿಷತ್ತಿನಲ್ಲಿ ಪದವೀಧರರ ಸಮಸ್ಯೆಗಳನ್ನು ಪ್ರಸ್ತಾಪಿಸುವುದರ ಜತೆಗೆ ಅವುಗಳಿಗೆ ಪರಿಹಾರ ಸೂಚಿಸಿದ್ದಾರೆ. ಪದವೀಧರರ ಬೇಡಿಕೆಗಳ ಈಡೇರಿಕೆಗಾಗಿ ಸದನದ ಒಳಗೆ ಹಾಗೂ ಹೊರಗೆ ಶ್ರಮಿಸಿದ್ದಾರೆ. ತಮ್ಮ ವ್ಯಾಪ್ತಿಯ ನಾಲ್ಕೂ ಜಿಲ್ಲೆಗಳಲ್ಲಿ ಪ್ರತಿ ವರ್ಷ ಉದ್ಯೋಗ ಮೇಳಗಳನ್ನು ಆಯೋಜಿಸಿ ಸಾವಿರಾರು ಪದವೀಧರರಿಗೆ ಉದ್ಯೋಗ ದೊರೆಯಲು ನೆರವಾಗಿದ್ದಾರೆ. ಇಂತಹ ನಾಯಕರು ಮತ್ತೊಮ್ಮೆ ವಿಧಾನಪರಿಷತ್ತಿಗೆ ಆಯ್ಕೆಯಾಗಬೇಕು ಎಂದು ಹೇಳಿದರು.

ರಾಜ್ಯದಲ್ಲಿ ಭೀಕರ ಬರಗಾಲ ಆವರಿಸಿದ್ದು, ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಹಿಂದಿನ ಬಿಜೆಪಿ ಸರ್ಕಾರ ಅತಿವೃಷ್ಟಿಯಿಂದ ಉಂಟಾದ ಹಾನಿಗೆ ಕೇಂದ್ರದಿಂದ ಬಂದ ನೆರವಿನ ದುಪ್ಪಟ್ಟು ಮೊತ್ತವಾಗಿ ಸುಮಾರು ₹17 ಸಾವಿರ ಕೋಟಿ ರೈತರಿಗೆ ನೆರವು ನೀಡಿತ್ತು. ಆದರೆ, ಈಗಿನ ರಾಜ್ಯ ಸರ್ಕಾರ ಬರ ನಿರ್ವಹಣೆಯಲ್ಲಿ ಗಂಭೀರವಾಗಿ ಕಾರ್ಯನಿರ್ವಹಿಸುತ್ತಿಲ್ಲ ಎಂದು ಬೊಮ್ಮಾಯಿ ಆರೋಪಿಸಿದರು.

ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಖಜಾನೆ ಖಾಲಿಯಾಗಿದ್ದು, ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡಿವೆ. ಪದವೀಧರರು ಪ್ರಬುದ್ಧತೆಯಿಂದ ಮತ ಚಲಾಯಿಸಿ ಸಂಕನೂರ ಅವರನ್ನು ಆಯ್ಕೆ ಮಾಡಬೇಕು. 2028ರಲ್ಲಿ ರಾಜ್ಯದಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬರಲು ಹಾಗೂ 2029ರಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಮತ್ತೆ ಕೇಂದ್ರದಲ್ಲಿ ಅಧಿಕಾರಕ್ಕೇರಲು ಈ ಗೆಲುವು ಬಲ ನೀಡಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಶಾಸಕ ಗಂಗಣ್ಣ ಮಹಾಂತಶೆಟ್ಟರ ಹಾಗೂ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ ಮಾತನಾಡಿ, ಸಂಕನೂರ ಅವರ ಹ್ಯಾಟ್ರಿಕ್ ಗೆಲುವಿಗಾಗಿ ಎಲ್ಲರೂ ಪ್ರಾಮಾಣಿಕವಾಗಿ ಶ್ರಮಿಸುತ್ತಿದ್ದಾರೆ ಎಂದರು.

ಸಭೆಯಲ್ಲಿ ಮಂಡಳ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ಸಣ್ಣೀರಪ್ಪ ಹಳ್ಳೆಪ್ಪನವರ, ಡಿ.ವೈ. ಹುನಗುಂದ, ಪ್ರವೀಣ ಬಾಳಿಕಾಯಿ, ಫಕ್ಕೀರೇಶ ರಟ್ಟಿಹಳ್ಳಿ, ಎಂ.ಎಸ್. ಕರಿಗೌಡ್ರ, ಎನ್.ಕೆ. ಕುಲಕರ್ಣಿ, ಅಶ್ವಿನಿ ಅಂಕಲಕೋಟಿ, ತಿಮ್ಮರಡ್ಡಿ ಮರಡ್ಡಿ, ಶಿವಪ್ರಕಾಶ ಮಹಾಜನಶೆಟ್ಟರ, ಸೋಮಣ್ಣ ಡಾಣಗಲ್, ವಿಜಯ ಕುಂಬಾರ, ನಾಗರಾಜ ಲಕ್ಕುಂಡಿ, ಲಿಂಗರಾಜಗೌಡ ಪಾಟೀಲ, ಗಂಗಾಧರ ಮೆಣಸಿನಕಾಯಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

---

## ಹುಲಕೋಟಿ ಕಾಲೇಜಿನಲ್ಲಿ ಸಮಕಾಲೀನ ಸಮಸ್ಯೆಗಳ ಕುರಿತು ಕಾರ್ಯಾಗಾರ

# ಹಣಕಾಸು ವರದಿ, ಯೋಜನಾ ಸಿದ್ಧತೆಯ ಕೌಶಲ ಬೆಳೆಸಿಕೊಳ್ಳಿ




> ಹಣಕಾಸು ವರದಿಗಳಲ್ಲಿ ನಿಖರತೆ, ಪಾರದರ್ಶಕತೆ ಮತ್ತು ಹೊಣೆಗಾರಿಕೆ ಅತ್ಯಂತ ಮುಖ್ಯ. ವಿದ್ಯಾರ್ಥಿಗಳು ವರದಿಗಳ ಮಾಹಿತಿಯನ್ನು ವಿಶ್ಲೇಷಿಸುವ ಸಾಮರ್ಥ್ಯ ಬೆಳೆಸಿಕೊಂಡು, ಯೋಜನಾ ವರದಿ ಸಿದ್ಧಪಡಿಸುವ ಕೌಶಲವನ್ನು ತಮ್ಮ ಭವಿಷ್ಯದ ವೃತ್ತಿಜೀವನದಲ್ಲಿ ಅಳವಡಿಸಿಕೊಳ್ಳಬೇಕು.
> – ಡಾ. ಅಪ್ಪಣ್ಣ ಎನ್. ಹಂಜೆ, ಪ್ರಾಂಶುಪಾಲರು

**ವಿಜಯಸಾಕ್ಷಿ ಸುದ್ದಿ, ಹುಲಕೋಟಿ**

ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ವಾಣಿಜ್ಯ ವಿದ್ಯಾರ್ಥಿಗಳು ಹಣಕಾಸು ವರದಿಗಳನ್ನು ವಿಶ್ಲೇಷಿಸುವ ಹಾಗೂ ಯೋಜನಾ ವರದಿಗಳನ್ನು ಕ್ರಮಬದ್ಧವಾಗಿ ಸಿದ್ಧಪಡಿಸುವ ಕೌಶಲಗಳನ್ನು ಬೆಳೆಸಿಕೊಳ್ಳಬೇಕು ಎಂದು ಹುಲಕೋಟಿ ಶ್ರೀ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಾಣಿಜ್ಯ ವಿಭಾಗದ ಮುಖ್ಯಸ್ಥ ಡಾ. ಲಕ್ಷ್ಮಣ ಸಿ. ಮುಳಗುಂದ ಹೇಳಿದರು.

ಕಾಲೇಜಿನ ಆಂತರಿಕ ಗುಣಮಟ್ಟ ಭರವಸೆ ಕೋಶ (ಐಕ್ಯೂಎಸಿ) ಹಾಗೂ ವಾಣಿಜ್ಯ ವಿಭಾಗದ ಸಹಯೋಗದಲ್ಲಿ "ಹಣಕಾಸು ವರದಿ ಮತ್ತು ಯೋಜನಾ ವರದಿಯಲ್ಲಿನ ಸಮಕಾಲೀನ ಸಮಸ್ಯೆಗಳು" ವಿಷಯದ ಕುರಿತು ಆಯೋಜಿಸಿದ್ದ ಒಂದು ದಿನದ ಕಾರ್ಯಾಗಾರದಲ್ಲಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಹಣಕಾಸು ವರದಿಗಳನ್ನು ಓದುವುದು, ಅವುಗಳಲ್ಲಿನ ಮಾಹಿತಿಯನ್ನು ವಿಶ್ಲೇಷಿಸುವುದು ಹಾಗೂ ಯೋಜನಾ ವರದಿಗಳನ್ನು ಕ್ರಮಬದ್ಧವಾಗಿ ಸಿದ್ಧಪಡಿಸುವುದು ವಾಣಿಜ್ಯ ವಿದ್ಯಾರ್ಥಿಗಳಿಗೆ ಅಗತ್ಯವಾದ ಕೌಶಲಗಳಾಗಿವೆ. ಈ ಕಾರ್ಯಾಗಾರವು ವಿದ್ಯಾರ್ಥಿಗಳ ಪರೀಕ್ಷಾ ಸಿದ್ಧತೆ ಹಾಗೂ ಭವಿಷ್ಯದ ವೃತ್ತಿಜೀವನಕ್ಕೆ ಪೂರಕವಾಗಿದ್ದು, ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು. ಅಣ್ಣಿಗೇರಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹ ಪ್ರಾಧ್ಯಾಪಕ ಹಾಗೂ ಸಂಪನ್ಮೂಲ ವ್ಯಕ್ತಿ ಡಾ. ಎಫ್.ಬಿ. ಆನಿ ಅವರು ಹಣಕಾಸು ವರದಿ ಮತ್ತು ಯೋಜನಾ ವರದಿಗಳಲ್ಲಿನ ಸಮಕಾಲೀನ ವಿಷಯಗಳ ಕುರಿತು ಮಾಹಿತಿ ನೀಡಿದರು. ಯೋಜನೆಗಳ ರೂಪುರೇಷೆ ಸಿದ್ಧಪಡಿಸುವಿಕೆ, ದಾಖಲೀಕರಣ, ಮೇಲ್ವಿಚಾರಣೆ ಹಾಗೂ ಮೌಲ್ಯಮಾಪನದ ಮಹತ್ವವನ್ನು ವಿವರಿಸಿದರು. ಸ್ಪಷ್ಟ ಉದ್ದೇಶಗಳು, ಸೂಕ್ತ ಕಾರ್ಯವಿಧಾನಗಳು, ಹಣಕಾಸಿನ ಅಂದಾಜುಗಳು, ಅನುಷ್ಠಾನದ ಯೋಜನೆಗಳು ಮತ್ತು ನಿರೀಕ್ಷಿತ ಫಲಿತಾಂಶಗಳನ್ನು ಒಳಗೊಂಡ ವರದಿಗಳ ಸಿದ್ಧತೆ ಕುರಿತು ಮಾರ್ಗದರ್ಶನ ನೀಡಿದರು.

ಕಾರ್ಯಾಗಾರದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ. ಅಪ್ಪಣ್ಣ ಎನ್. ಹಂಜೆ ಮಾತನಾಡಿ, ಹಣಕಾಸು ವರದಿಗಳು ಸಂಸ್ಥೆಯ ಆರ್ಥಿಕ ಸ್ಥಿತಿಯನ್ನು ಅರಿಯಲು ಹಾಗೂ ಸೂಕ್ತ ನಿರ್ಧಾರಗಳನ್ನು ಕೈಗೊಳ್ಳಲು ಪ್ರಮುಖ ಆಧಾರವಾಗಿವೆ. ವರದಿಗಳಲ್ಲಿ ನಿಖರತೆ, ಪಾರದರ್ಶಕತೆ ಮತ್ತು ಹೊಣೆಗಾರಿಕೆ ಮುಖ್ಯವಾಗಿದ್ದು, ವಿದ್ಯಾರ್ಥಿಗಳು ಲೆಕ್ಕಪತ್ರಗಳ ಮಾಹಿತಿಯನ್ನು ವಿಶ್ಲೇಷಿಸುವ ಸಾಮರ್ಥ್ಯ ಬೆಳೆಸಿಕೊಳ್ಳಬೇಕು ಎಂದು ಹೇಳಿದರು. ಕಾರ್ಯಾಗಾರದಲ್ಲಿ ಕಲಿತ ವಿಷಯಗಳನ್ನು ಶೈಕ್ಷಣಿಕ ಅಧ್ಯಯನ ಹಾಗೂ ಭವಿಷ್ಯದ ವೃತ್ತಿಜೀವನದಲ್ಲಿ ಅಳವಡಿಸಿಕೊಳ್ಳುವಂತೆ ಸಲಹೆ ನೀಡಿದರು.

ಐಕ್ಯೂಎಸಿ ಸಂಯೋಜಕ ಡಾ. ಜಿತೇಂದ್ರ ಜಹಾಗೀರದಾರ ಮಾತನಾಡಿ, ಬದಲಾಗುತ್ತಿರುವ ತಂತ್ರಜ್ಞಾನ ಮತ್ತು ಆಧುನಿಕ ಜಗತ್ತಿನ ಸವಾಲುಗಳನ್ನು ವಿದ್ಯಾರ್ಥಿಗಳು ಅರಿತುಕೊಳ್ಳಬೇಕು. ಇಂತಹ ಕಾರ್ಯಾಗಾರಗಳು ಅವರ ಶೈಕ್ಷಣಿಕ ಹಾಗೂ ವೃತ್ತಿಪರ ಬೆಳವಣಿಗೆಗೆ ಸಹಕಾರಿಯಾಗುತ್ತವೆ ಎಂದರು.

ಸಸಿಗೆ ನೀರೆರೆಯುವ ಮೂಲಕ ಕಾರ್ಯಾಗಾರ ಉದ್ಘಾಟಿಸಲಾಯಿತು. ಡಾ. ಶ್ರೀಶವಿಠ್ಠಲ ದಿಗ್ಗಾವಿ ಸ್ವಾಗತಿಸಿದರು. ಡಾ. ಸುಜಾತ ಎಸ್. ಬರದೂರ ನಿರೂಪಿಸಿದರು. ವಾಣಿಜ್ಯ ವಿಭಾಗದ ಶ್ವೇತಾ ಪಾಲನಕರ ವಂದಿಸಿದರು.

ಡಾ. ಸಾರಿಕಾ ಪಾಟೀಲ, ರಮೇಶ ಹುಲಕುಂದ, ಡಾ. ನೇಮಾನಿ ಸತೀಶ, ಶಬ್ಬೀರ ಬಾಷಾ ಆಲೂರ, ಡಾ. ಕಿರಣ–ಕುಮಾರ ರಾಯರ ಸೇರಿದಂತೆ ಅಧ್ಯಾಪಕ ವರ್ಗದವರು ಹಾಗೂ ಬಿ.ಕಾಂ. ಅಂತಿಮ ವರ್ಷದ ವಿದ್ಯಾರ್ಥಿಗಳು ಕಾರ್ಯಾಗಾರದಲ್ಲಿ ಭಾಗವಹಿಸಿದ್ದರು.

---

## ನಗರೇಶ್ವರ ದೇವಸ್ಥಾನದಲ್ಲಿ ಇಂದು ಉಚಿತ ಆರೋಗ್ಯ ತಪಾಸಣೆ

**ವಿಜಯಸಾಕ್ಷಿ ಸುದ್ದಿ, ಗದಗ**



ಆರ್ಯವೈಶ್ಯ ಸಮಾಜದ ಶ್ರೀ ನಗರೇಶ್ವರ ದೇವಸ್ಥಾನ ಟ್ರಸ್ಟ್ ಕಮಿಟಿ ವತಿಯಿಂದ 51ನೇ ವರ್ಷದ ಶರನ್ನವರಾತ್ರಿ ಮಹೋತ್ಸವದ ಅಂಗವಾಗಿ ಅ. 18ರಂದು ಭಾನುವಾರ ಬೆಳಗ್ಗೆ 10ರಿಂದ ಮಧ್ಯಾಹ್ನ 2 ಗಂಟೆಯವರೆಗೆ ದೇವಸ್ಥಾನದ ಆವರಣದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಲಾಗಿದೆ.

ಗದಗದ ಡಿಜಿಎಂ ಆಯುರ್ವೇದ ಮೆಡಿಕಲ್ ಕಾಲೇಜಿನ ತಜ್ಞ ವೈದ್ಯರ ತಂಡ ಶಿಬಿರದಲ್ಲಿ ಆರೋಗ್ಯ ತಪಾಸಣೆ ನಡೆಸಲಿದೆ.

ಮಹೋತ್ಸವದ ಅಂಗವಾಗಿ ಕನ್ಯಕಾಪರಮೇಶ್ವರಿಗೆ ಶ್ರೀ ದುರ್ಗಾದೇವಿಯ ಅಲಂಕಾರ ನೆರವೇರಿಸಲಾಗುವುದು. ಸಂಜೆ 5.30ಕ್ಕೆ ಶ್ರೀ ವಾರಾಹಿ ದೇವಿ ಪೂಜೆ ನಡೆಯಲಿದೆ. ಸಂಜೆ 7.30ಕ್ಕೆ ಶ್ರದ್ಧಾ ಕಲಾ ತಂಡದಿಂದ ವಿವಿಧ ನೃತ್ಯ ವೈಭವ ಜರುಗಲಿದೆ. ರಾತ್ರಿ 8.30ಕ್ಕೆ ಶ್ರೀ ರಾಘವೇಂದ್ರ ಪಾದಯಾತ್ರಾ ಕಮಿಟಿಯಿಂದ ಪಾಲಕಿ ಸೇವೆ ಹಾಗೂ ಮಹಾಮಂಗಳಾರತಿ ನಡೆಯಲಿದೆ ಎಂದು ಸಂಘಟಕರು ತಿಳಿಸಿದ್ದಾರೆ.

---

## ಕಾಳಿಕಾದೇವಿಗೆ ಸಹಸ್ರ ಕುಂಕುಮಾರ್ಚನೆ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**



ಲಲಿತಾ ಸಹಸ್ರನಾಮದ ಸಾಮೂಹಿಕ ಪಠಣ, ಮುತ್ತೈದೆಯರ ಭಕ್ತಿಪೂರ್ವಕ ಕುಂಕುಮಾರ್ಚನೆ ಹಾಗೂ ದೇವಿಯ ಸನ್ನಿಧಿಯಲ್ಲಿ ಮೊಳಗಿದ ಮಂತ್ರಘೋಷ... ಇಂತಹ ಧಾರ್ಮಿಕ ವಾತಾವರಣ ನರೇಗಲ್ಲ ಪಟ್ಟಣದ ಶ್ರೀ ಕಾಳಿಕಾದೇವಿ ದೇವಸ್ಥಾನದಲ್ಲಿ ಭಕ್ತಿಭಾವವನ್ನು ಇಮ್ಮಡಿಗೊಳಿಸಿತು.

ದೇವಸ್ಥಾನದಲ್ಲಿ 54ನೇ ವರ್ಷದ ಶರನ್ನವರಾತ್ರಿ ಉತ್ಸವದ ಅಂಗವಾಗಿ ಗುರುವಾರ ಲಲಿತಾ ಸಹಸ್ರನಾಮ ಪಠಣದೊಂದಿಗೆ ಸಹಸ್ರ ಕುಂಕುಮಾರ್ಚನೆ ಕಾರ್ಯಕ್ರಮ ಶ್ರದ್ಧಾಭಕ್ತಿಯಿಂದ ನೆರವೇರಿತು.

ಮುತ್ತೈದೆಯರು ಲಲಿತಾ ಸಹಸ್ರನಾಮವನ್ನು ಪಠಿಸುತ್ತ ದೇವಿಗೆ ಕುಂಕುಮಾರ್ಚನೆ ಸಲ್ಲಿಸಿದರು. ಪ್ರತಿಯೊಂದು ನಾಮಸ್ಮರಣೆಯೊಂದಿಗೂ ದೇವಿಯ ಆರಾಧನೆಯಲ್ಲಿ ತಲ್ಲೀನರಾದ ಮಹಿಳೆಯರು ಧಾರ್ಮಿಕ ವಿಧಿವಿಧಾನಗಳಲ್ಲಿ ಪಾಲ್ಗೊಂಡರು. ವಿಶೇಷ ಪೂಜೆಯಲ್ಲಿ ಭಕ್ತರು ಭಾಗವಹಿಸಿ ಕಾಳಿಕಾದೇವಿಯ ದರ್ಶನ ಪಡೆದು ಪುನೀತರಾದರು.

ನವರಾತ್ರಿ ಉತ್ಸವವು ಕೇವಲ ಸಂಭ್ರಮಕ್ಕೆ ಸೀಮಿತವಾಗದೆ, ಸಾಮೂಹಿಕ ಪ್ರಾರ್ಥನೆ ಹಾಗೂ ಧಾರ್ಮಿಕ ಶ್ರದ್ಧೆಯ ಮೂಲಕ ಜನರನ್ನು ಬೆಸೆಯುವ ಪವಿತ್ರ ಸಂದರ್ಭವಾಗಿದೆ. ಈ ಹಿನ್ನೆಲೆಯಲ್ಲಿ ನಡೆದ ಸಹಸ್ರ ಕುಂಕುಮಾರ್ಚನೆ ಕಾರ್ಯಕ್ರಮವು ಉತ್ಸವದ ಧಾರ್ಮಿಕ ಮೆರುಗನ್ನು ಹೆಚ್ಚಿಸಿತು.

ಕಾಳಿಕಾದೇವಿ ಟ್ರಸ್ಟ್ ಕಮಿಟಿ, ನವರಾತ್ರಿ ಉತ್ಸವ ಸಮಿತಿ ಹಾಗೂ ಗಾಯತ್ರಿದೇವಿ ವಿವಿಧೋದ್ದೇಶಗಳ ಸೇವಾ ಸಮಿತಿಯ ಸಹಕಾರದಲ್ಲಿ ದೇವಸ್ಥಾನದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯುತ್ತಿವೆ.

ಈ ಸಂದರ್ಭದಲ್ಲಿ ರಿಂದಮ್ಮ ವಡ್ಡಟ್ಟಿ, ಗೀತಾ ಬಡಿಗೇರ, ಸುವರ್ಣ ತೋಟಗಂಟಿ, ಅಕ್ಷತಾ ಶರೇವಾಡ, ಲಕ್ಷ್ಮೀ ವಡ್ಡಟ್ಟಿ, ಸುನಂದಾ ಬಡಿಗೇರ, ಚಿತ್ರಾ ಬಡಿಗೇರ, ಅಕ್ಷತಾ ವಡ್ಡಟ್ಟಿ, ಶ್ಯಾಮಲಾ ಬಡಿಗೇರ, ಸುಭದ್ರಾ ಬಡಿಗೇರ, ಮೀನಾಕ್ಷಿ ಬಡಿಗೇರ, ಗೌರಿ ಬಡಿಗೇರ ಹಾಗೂ ಸನ್ನದಿ ಹೂಲಗೇರಿ ಉಪಸ್ಥಿತರಿದ್ದರು.

---

## ಸುಳ್ಳು ಸುದ್ದಿ, ವದಂತಿ ಹರಡದಿರಲಿ, ಡಿಜಿಟಲ್ ಬಳಕೆಯಲ್ಲಿ ಎಚ್ಚರವಿರಲಿ

# ಸಾಮಾಜಿಕ ಮಾಧ್ಯಮಕ್ಕೆ ವಿವೇಕವೇ ಲಗಾಮು

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ವಿದ್ಯಾರ್ಥಿಗಳಲ್ಲಿ ಮಾಧ್ಯಮ ಸಾಕ್ಷರತೆ ಬೆಳೆಸುವ ಮೂಲಕ ಡಿಜಿಟಲ್ ಮಾಧ್ಯಮಗಳನ್ನು ವಿವೇಕಯುತವಾಗಿ ಬಳಸಲು ಪ್ರೇರೇಪಿಸಿದರೆ ಜಾಗೃತ, ಜವಾಬ್ದಾರಿಯುತ ಹಾಗೂ ಪ್ರಗತಿಪರ ಸಮಾಜ ನಿರ್ಮಿಸಬಹುದು ಎಂದು ಮೈಸೂರು ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಪ್ರಾಧ್ಯಾಪಕಿ ಪ್ರೊ. ಸಪ್ನಾ ನಾಯಕ ಅಭಿಪ್ರಾಯಪಟ್ಟರು.



ಕರ್ನಾಟಕ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಸಭಾಂಗಣದಲ್ಲಿ 'ಸಾಮಾಜಿಕ ಮಾಧ್ಯಮ ಮತ್ತು ಸಮಾಜ' ವಿಷಯದ ಕುರಿತು ನಡೆದ ವಿಶೇಷ ಉಪನ್ಯಾಸದಲ್ಲಿ ಅವರು ಮಾತನಾಡಿದರು.

ಸುದ್ದಿಗಳು ಸಮಾಜದ ಚಿಂತನೆಯನ್ನು ರೂಪಿಸುವ ಜವಾಬ್ದಾರಿಯುತ ಶಕ್ತಿಯಾಗಿವೆ. ಸಾಮಾಜಿಕ ಮಾಧ್ಯಮಗಳಲ್ಲಿ ಯಾವುದೇ ವಿಷಯಕ್ಕೆ ಪ್ರತಿಕ್ರಿಯಿಸುವ ಮೊದಲು ವಿಮರ್ಶಾತ್ಮಕವಾಗಿ ಆಲೋಚಿಸಬೇಕು. ವದಂತಿಗಳನ್ನು ಹರಡುವುದರಿಂದ ದೂರವಿರಬೇಕು. ಸುಳ್ಳು ಸುದ್ದಿ, ವೈಯಕ್ತಿಕ ಮಾಹಿತಿಯ ಸೋರಿಕೆ ಹಾಗೂ ಗೌಪ್ಯತೆಯ ಉಲ್ಲಂಘನೆ ಡಿಜಿಟಲ್ ಮಾಧ್ಯಮದ ಪ್ರಮುಖ ಸವಾಲುಗಳಾಗಿವೆ. ಇವುಗಳನ್ನು ತಡೆಗಟ್ಟಲು ಮಾಧ್ಯಮ ಮತ್ತು ಡಿಜಿಟಲ್ ಸಾಕ್ಷರತೆ ಬೆಳೆಸಿಕೊಳ್ಳುವುದು ಅಗತ್ಯ ಎಂದರು.

ಪ್ರಸ್ತುತ ಸಾಮಾಜಿಕ ಮಾಧ್ಯಮಗಳಲ್ಲಿ ನಕಾರಾತ್ಮಕ ವಿಷಯಗಳು ಹೆಚ್ಚುತ್ತಿವೆ. ಫೇಸ್‌ಬುಕ್, ಇನ್‌ಸ್ಟಾಗ್ರಾಂ ಹಾಗೂ ಯೂಟ್ಯೂಬ್‌ನಂತಹ ವೇದಿಕೆಗಳಲ್ಲಿ ಕಂಟೆಂಟ್ ಕ್ರಿಯೇಟರ್‌ಗಳು ಜವಾಬ್ದಾರಿಯುತವಾಗಿ ನಡೆದುಕೊಂಡು, ಸಕಾರಾತ್ಮಕ ಹಾಗೂ ಸಮಾಜಕ್ಕೆ ಉಪಯುಕ್ತವಾದ ವಿಷಯಗಳನ್ನು ಹಂಚಿಕೊಳ್ಳಬೇಕು ಎಂದು ಸಲಹೆ ನೀಡಿದರು. ದೇಶದಲ್ಲಿಯೇ ಮಾಧ್ಯಮ ಸಾಕ್ಷರತೆಯನ್ನು ಪ್ರಾಥಮಿಕ ಶಿಕ್ಷಣದ ಪಠ್ಯಕ್ರಮದಲ್ಲಿ ಅಳವಡಿಸಿಕೊಂಡ ಮೊದಲ ರಾಜ್ಯ ಕೇರಳ. ಫ್ರಾನ್ಸ್‌ನಲ್ಲಿ ಸಾಮಾಜಿಕ ಜಾಲತಾಣಗಳ ನಿಯಂತ್ರಣಕ್ಕೆ ವಿಶೇಷ ಕಾನೂನು ಜಾರಿಗೊಳಿಸಲಾಗಿದೆ ಎಂದು ತಿಳಿಸಿದರು.

ಮಾಧ್ಯಮಕ್ಕೆ ಸಮಾಜದ ನಡವಳಿಕೆಯನ್ನು ಬದಲಿಸುವ ಶಕ್ತಿಯಿದೆ. ಹೀಗಾಗಿ ಸಾಮಾಜಿಕ ಜಾಲತಾಣಗಳನ್ನು ಎಚ್ಚರಿಕೆಯಿಂದ ಬಳಸಬೇಕು. ಯಾವುದೇ ವಿಷಯವನ್ನು ಹಂಚಿಕೊಳ್ಳುವ ಮೊದಲು ಅದರ ಸತ್ಯಾಸತ್ಯತೆಯನ್ನು ಪರಿಶೀಲಿಸುವ ಅಭ್ಯಾಸ ಬೆಳೆಸಿಕೊಳ್ಳಬೇಕು. ಉತ್ತಮ ಪತ್ರಿಕೋದ್ಯಮಕ್ಕೆ ಸಮಗ್ರ ಮಾಹಿತಿ ಸಂಗ್ರಹಣೆ ಮತ್ತು ಸತ್ಯಾಸತ್ಯತೆಯ ಪರಿಶೀಲನೆ ಅತ್ಯಗತ್ಯ. ಪತ್ರಿಕೋದ್ಯಮ ವಿದ್ಯಾರ್ಥಿಗಳು ಪ್ರತಿಯೊಂದು ವಿಷಯದ ಕುರಿತು ಸಮಗ್ರ ತಿಳುವಳಿಕೆ ಬೆಳೆಸಿಕೊಂಡು, ಆಲೋಚಿಸಿ ಬರೆಯುವುದನ್ನು ರೂಢಿಸಿಕೊಳ್ಳಬೇಕು ಎಂದು ಹೇಳಿದರು. ಬಳಿಕ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು.

ವಿಭಾಗದ ಮುಖ್ಯಸ್ಥ ಪ್ರೊ. ಜೆ.ಎಂ. ಚಂದುನವರ ಅಧ್ಯಕ್ಷತೆ ವಹಿಸಿ ಮಾತನಾಡಿ, ಸಾಮಾಜಿಕ ಮಾಧ್ಯಮವು ಈಗ ಲಗಾಮಿಲ್ಲದ ಕುದುರೆಯಂತಾಗಿದ್ದು, ಅದರ ಬಳಕೆಯಲ್ಲಿ ಎಚ್ಚರಿಕೆ ಅಗತ್ಯ ಎಂದರು. ದೇಶದಲ್ಲಿ ಸೈಬರ್ ಅಪರಾಧಗಳು ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಪೊಲೀಸ್ ಇಲಾಖೆಗೆ ದೊಡ್ಡ ಸವಾಲಾಗಿವೆ. ನಕಲಿ ಖಾತೆಗಳ ನಿಯಂತ್ರಣಕ್ಕೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಪರಿಣಾಮಕಾರಿ ಕಾನೂನುಗಳನ್ನು ಜಾರಿಗೊಳಿಸುವುದು ಅತ್ಯಗತ್ಯ ಎಂದು ಅಭಿಪ್ರಾಯಪಟ್ಟರು.

ವಿಭಾಗದ ಪ್ರಾಧ್ಯಾಪಕ ಪ್ರೊ. ಎಸ್.ಎಂ. ಮಾಲಗತ್ತಿ ಹಾಗೂ ಸಂಶೋಧನಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಸಪ್ನಾ ಭಾಟಿಯಾ ಸ್ವಾಗತಿಸಿ ವಂದಿಸಿದರು.

---

# ರಂಗೋಲಿ ಸ್ಪರ್ಧೆ: ಲತಾ ಕಳಕಣ್ಣವರಗೆ ಪ್ರಥಮ ಸ್ಥಾನ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಬಣ್ಣಬಣ್ಣದ ಚುಕ್ಕಿಗಳಲ್ಲಿ ಕಲ್ಪನೆಗೆ ಜೀವ ತುಂಬಿ, ಆಕರ್ಷಕ ವಿನ್ಯಾಸಗಳ ಮೂಲಕ ಸೌಂದರ್ಯದ ಲೋಕವನ್ನೇ ಸೃಷ್ಟಿಸಿದ ಮಹಿಳೆಯರ ಕಲಾತ್ಮಕ ಪ್ರತಿಭೆಗೆ ಪಟ್ಟಣದ ಶ್ರೀ ಕಾಳಿಕಾದೇವಿ ದೇವಸ್ಥಾನ ಸಾಕ್ಷಿಯಾಯಿತು.

ಶರನ್ನವರಾತ್ರಿ ಉತ್ಸವದ ಅಂಗವಾಗಿ ಶ್ರೀ ಗಾಯತ್ರಿದೇವಿ ಮಹಿಳಾ ಮಂಡಳದ ಪ್ರಾಯೋಜಕತ್ವದಲ್ಲಿ ಆಯೋಜಿಸಿದ್ದ ರಂಗೋಲಿ ಸ್ಪರ್ಧೆಯಲ್ಲಿ ಮಹಿಳೆಯರು ಉತ್ಸಾಹದಿಂದ ಪಾಲ್ಗೊಂಡು ತಮ್ಮ ಸೃಜನಶೀಲತೆಯನ್ನು ಅನಾವರಣಗೊಳಿಸಿದರು. ಬಣ್ಣಗಳ ಸುಂದರ ಸಂಯೋಜನೆ, ವೈವಿಧ್ಯಮಯ ವಿನ್ಯಾಸ ಹಾಗೂ ವಿಶಿಷ್ಟ ಕಲ್ಪನೆಗಳಿಂದ ಮೂಡಿಬಂದ ರಂಗೋಲಿಗಳು ನೋಡುಗರ ಗಮನ ಸೆಳೆದವು. ಮಹಿಳೆಯರ ಕಲ್ಪನಾಶಕ್ತಿ, ತಾಳ್ಮೆ, ಏಕಾಗ್ರತೆ ಹಾಗೂ ಕಲೆಯ ಮೇಲಿನ ಆಸಕ್ತಿ ರಂಗೋಲಿಗಳಲ್ಲಿ ಪ್ರತಿಬಿಂಬಿತವಾಯಿತು.

ರಂಗೋಲಿ ಸ್ಪರ್ಧೆಯು ಮಹಿಳೆಯರಲ್ಲಿರುವ ಸುಪ್ತ ಪ್ರತಿಭೆಯನ್ನು ಹೊರತರುವುದರ ಜತೆಗೆ, ಪರಸ್ಪರ ಸ್ನೇಹ, ಸೌಹಾರ್ದ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಬೆಳೆಸುವ ವೇದಿಕೆಯಾಯಿತು. ಶರನ್ನವರಾತ್ರಿ ಸಂಭ್ರಮಕ್ಕೂ ವಿಶೇಷ ಮೆರುಗು ನೀಡಿತು. ಎಲ್‌ಐಸಿ ಪ್ರತಿನಿಧಿ ಅರ್ಚನಾ ಕುಲಕರ್ಣಿ ಹಾಗೂ ಫಾರ್ಮಸಿಸ್ಟ್ ನಿಖಿತಾ ಗ್ರಾಮಪುರೋಹಿತ ಅವರು ನಿರ್ಣಾಯಕರಾಗಿ ಭಾಗವಹಿಸಿ, ಸ್ಪರ್ಧಾಳುಗಳ ರಂಗೋಲಿಗಳನ್ನು ಪರಿಶೀಲಿಸಿ ವಿಜೇತರನ್ನು ಆಯ್ಕೆ ಮಾಡಿದರು. ಸ್ಪರ್ಧೆಯಲ್ಲಿ ಲತಾ ಕಳಕಣ್ಣವರ ಪ್ರಥಮ, ಅಕ್ಷತಾ ವಡ್ಡಟ್ಟಿ ದ್ವಿತೀಯ ಹಾಗೂ ರೇಣುಕಾ ಕಳಕಣ್ಣವರ ತೃತೀಯ ಸ್ಥಾನ ಗಳಿಸಿದರು.

ಈ ಸಂದರ್ಭದಲ್ಲಿ ಶ್ರೀ ಗಾಯತ್ರಿದೇವಿ ಮಹಿಳಾ ಮಂಡಳದ ಅಧ್ಯಕ್ಷೆ ಲಕ್ಷ್ಮಿ ತೋಟಗಂಟಿ, ಮಾಜಿ ಅಧ್ಯಕ್ಷೆ ರಿಂದಮ್ಮ ವಡ್ಡಟ್ಟಿ, ಕಾರ್ಯದರ್ಶಿ ಗೀತಾ ಬಡಿಗೇರ, ಶ್ಯಾಮಲಾ ಬಡಿಗೇರ, ನಾಗರತ್ನ ಹೂಲಗೇರಿ, ಶಾಂತಾ ಹೊಸಮನಿ, ಸುನಂದ ಪತ್ತಾರ, ಮಂಗಳ ಶರೇವಾಡ, ವೇದ ಶರೇವಾಡ, ಅಕ್ಷತಾ ಶರೇವಾಡ, ದ್ರಾಕ್ಷಾಯಣಿ ವಿಶ್ವಕರ್ಮ ಸೇರಿದಂತೆ ಮಂಡಳದ ಸದಸ್ಯರು ಹಾಗೂ ಇತರರು ಉಪಸ್ಥಿತರಿದ್ದರು. ಮೌನೇಶ ಹೊಸಮನಿ ಭಾಗವಹಿಸಿದ್ದರು.

---

## ಮರಾಠಾ ವಿದ್ಯಾವರ್ಧಕ ಸಂಘದಲ್ಲಿ ದಾಂಡಿಯಾ ಸಂಭ್ರಮ



**ವಿಜಯಸಾಕ್ಷಿ ಸುದ್ದಿ, ಗದಗ**

ನವರಾತ್ರಿ ಉತ್ಸವದ ಅಂಗವಾಗಿ ನಗರದ ಮುಳಗುಂದ ನಾಕಾ ಸಮೀಪದ ಮರಾಠಾ ವಿದ್ಯಾವರ್ಧಕ ಸಂಘದ ಶ್ರೀ ಜಗದಂಬಾ ದೇವಸ್ಥಾನದಲ್ಲಿ ಅ. 16ರಂದು ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ದಾಂಡಿಯಾ ನೃತ್ಯ ಸಂಭ್ರಮದಿಂದ ಜರುಗಿದವು.

ಶುಕ್ರವಾರ ಸಂಜೆ ನಡೆದ ಕಾರ್ಯಕ್ರಮದಲ್ಲಿ ಹ.ಬ.ಫ. ಶ್ರೀ ರಮೇಶ ಮ. ಶೇಂಡ್ಗೆ ಅವರು ಪುರಾಣ ಪ್ರವಚನ ನೀಡಿದರು. ಬಳಿಕ ಶ್ರೀ ರಾಜಮಾತಾ ಜೀಜಾಬಾಯಿ ಮಹಿಳಾ ಮಂಡಳದ ವತಿಯಿಂದ ದಾಂಡಿಯಾ ನೃತ್ಯ ಸೇರಿದಂತೆ ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು.

ಸೀರೆ ವಿನ್ಯಾಸ ಸ್ಪರ್ಧೆಯಲ್ಲಿ ದೀಪ್ತಿ ಪಾವನ ಪ್ರಥಮ, ಅಂಕಿತಾ ಮಾನೆ ದ್ವಿತೀಯ ಹಾಗೂ ವನಿತಾ ಆರೇರ ತೃತೀಯ ಸ್ಥಾನ ಪಡೆದರು. ರಂಗೋಲಿ ಸ್ಪರ್ಧೆಯಲ್ಲಿ ವೀಣಾ ಮಗದುಮ್ ಪ್ರಥಮ, ದೀಪ್ತಿ ಪಾವನ ದ್ವಿತೀಯ ಹಾಗೂ ತುಳಜಾ ಮರೋಳ ತೃತೀಯ ಸ್ಥಾನ ಗಳಿಸಿದರು. ಸ್ಪರ್ಧೆಗಳ ತೀರ್ಪುಗಾರರಾಗಿ ಸುಮನ್ ದತ್ತಪ್ರಸನ್ನ ಪಾಟೀಲ ಭಾಗವಹಿಸಿದ್ದರು. ವಿಜೇತರಿಗೆ ಸಂಘದ ಅಧ್ಯಕ್ಷ ಅರುಣಕುಮಾರ ಬಿ. ಚವ್ಹಾಣ ಹಾಗೂ ಮಹಿಳಾ ಮಂಡಳದ ಅಧ್ಯಕ್ಷೆ ಅಶ್ವಿನಿ ಜಗತಾಪ ಬಹುಮಾನ ವಿತರಿಸಿದರು.

ಕಾರ್ಯಕ್ರಮದಲ್ಲಿ ಭರತನಾಟ್ಯ, ಜಾನಪದ ನೃತ್ಯ ಸೇರಿದಂತೆ ವಿವಿಧ ನೃತ್ಯ ಪ್ರದರ್ಶನಗಳು ಗಮನ ಸೆಳೆದವು. ಚಿಕ್ಕ ಮಕ್ಕಳಿಗಾಗಿ ವಿನೋದಾವಳಿ ಆಟಗಳು ಹಾಗೂ ಮನರಂಜನಾ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಬಳಿಕ ನಡೆದ ದಾಂಡಿಯಾ ನೃತ್ಯದಲ್ಲಿ ಮಹಿಳೆಯರು ಹಾಗೂ ಸಮಾಜ ಬಾಂಧವರು ಉತ್ಸಾಹದಿಂದ ಪಾಲ್ಗೊಂಡರು.

ಸಮಾಜದ ಹಿರಿಯರಾದ ಮೋಹನರಾವ್ ಗ್ವಾರಿ, ನಾರಾಯಣ ಚವ್ಹಾಣ, ಶಿವಾಜಿರಾವ್ ಪಾವನ, ಅರುಣ ಗ್ವಾರಿ, ವಿನಿತಕುಮಾರ ಜಗತಾಪ, ಪರಶುರಾಮ ಜಾಧವ, ಶಿವಾಜಿ ಗ್ವಾರಿ, ಬಸವರಾಜ ಹುಬ್ಬಳ್ಳಿ, ನರಸಪ್ಪ ತುಕ್ಕಪ್ಪನವರ, ಸುರೇಶ ಬೇಂದ್ರೆ, ಮಾರುತಿ ಅರಳಿಕಟ್ಟಿ, ವೀರಣ್ಣ ಪವಾರ, ಅಣ್ಣಪ್ಪ ಹೆಬ್ಬಳ್ಳಿ, ಸುಭಾಸ ಕದಡಿ, ಮಹೇಶ ಶಟವಾಜಿ, ಚೇತನ ಘಾಟಗೆ, ಮಂಜು ಮಾನೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಮಹಿಳಾ ಮಂಡಳದ ಸುಜಾತಾ ಮರೋಳ, ಜಯಶ್ರೀ ಜಾಧವ, ಪದ್ಮಾವತಿ ಶೇಳಕೆ, ಮಾಲಾಶ್ರೀ ಜಾಧವ, ಜಾನಕಿ ನಲವಡೆ, ಕಾಂಚನಾ ಬೇಂದ್ರೆ, ವರ್ಷಾ ಎಲಿಗಾರ, ರೇಣುಕಾ ಮಾನೆ, ಶೋಭಾ ಘಾಟಗೆ, ದೀಪಾ ಮಾಡಿಕ್ ಸೇರಿದಂತೆ ಅನೇಕರು ಭಾಗವಹಿಸಿದ್ದರು. ಶ್ರೀಮತಿ ಶೃತಿ ಗ್ವಾರಿ ಕಾರ್ಯಕ್ರಮ ನಿರೂಪಿಸಿದರು.

---

# ಮಹಿಳಾ ಕ್ರಿಕೆಟ್ ವಲಯ ತಂಡಕ್ಕೆ ಭೂಮಿಕಾ ಸವದಿ ಆಯ್ಕೆ

**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಸ್ಪೋರ್ಟ್ಸ್ ಅಕಾಡೆಮಿ ಆಫ್ ಗದಗದ ಪ್ರತಿಭಾನ್ವಿತ ಕ್ರಿಕೆಟ್ ಆಟಗಾರ್ತಿ ಭೂಮಿಕಾ ಸವದಿ ಅವರು 15 ವರ್ಷದೊಳಗಿನವರ ಕೆಎಸ್‌ಸಿಎ ಧಾರವಾಡ ವಲಯ ಮಹಿಳಾ ಕ್ರಿಕೆಟ್ ತಂಡಕ್ಕೆ ಆಯ್ಕೆಯಾಗಿದ್ದಾರೆ.

ಧಾರವಾಡ ವಲಯ ತಂಡವನ್ನು ಪ್ರತಿನಿಧಿಸಲಿರುವ ಭೂಮಿಕಾ ಅವರು ಬೆಂಗಳೂರಿನಲ್ಲಿ ನಡೆಯಲಿರುವ ಅಂತರ್‌ವಲಯ ಕ್ರಿಕೆಟ್ ಟೂರ್ನಿಯಲ್ಲಿ ಪಾಲ್ಗೊಳ್ಳಲಿದ್ದಾರೆ. ಅವರ ಆಯ್ಕೆಯಿಂದ ಕ್ರೀಡಾಭಿಮಾನಿಗಳು ಹಾಗೂ ಅಕಾಡೆಮಿಯ ಸದಸ್ಯರಲ್ಲಿ ಸಂತಸ ವ್ಯಕ್ತವಾಗಿದೆ. ಸ್ಪೋರ್ಟ್ಸ್ ಅಕಾಡೆಮಿ ಆಫ್ ಗದಗದ ಚೇರ್ಮನ್ ಮುನ್ನಾ ಗುಳೇದಗುಡ್ಡ ಹಾಗೂ ಮುಖ್ಯ ತರಬೇತುದಾರರು ಭೂಮಿಕಾ ಅವರ ಸಾಧನೆಗೆ ಅಭಿನಂದನೆ ಸಲ್ಲಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka